ಸಂಪುಟ : 11 ಸಂಚಿಕೆ: 23 ಪುಟ : 4+2 ಬೆಲೆ: 3.00 ಶುಕ್ರವಾರ ಫೆಬ್ರವರಿ 20 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 23 Pages : 4+2 Price : 3.00 Friday February 20 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಶ್ರೀರಾಮ ಸೇನೆ, ಹಿಂದೂಪರ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಶಿವಾಜಿ ಜಯಂತಿ ಅದ್ದೂರಿ ಆಚರಣೆ

# ಕೇಸರಿಮಯವಾದ ಗದಗ-ಬೆಟಗೇರಿ ಅವಳಿ ನಗರ





**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಗುರುವಾರ ಶ್ರೀರಾಮ ಸೇನೆ ಹಾಗೂ ವಿವಿಧ ಹಿಂದೂಪರ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಅತ್ಯಂತ ವೈಭವದಿಂದ ಜರುಗಿತು. ಛತ್ರಪತಿ ಶಿವಾಜಿ ಮಹಾರಾಜರ ಬೃಹತ್ ಮೂರ್ತಿಯ ಮೆರವಣಿಗೆಯು ಅವಳಿ ನಗರವನ್ನು ಕೇಸರಿಮಯವಾಗಿಸಿತ್ತು.

ಈ ಬಾರಿಯ ಮೆರವಣಿಗೆಯಲ್ಲಿ ಕೇವಲ ಶಿವಾಜಿ ಮಹಾರಾಜರಷ್ಟೇ ಅಲ್ಲದೆ, 17 ಅಡಿ ಎತ್ತರದ ಪ್ರಭು ಶ್ರೀರಾಮ, ಸಹಸ್ರಾರ್ಜುನ, ಮಹರ್ಷಿ ವಾಲ್ಮೀಕಿ, ವೀರಮಾತೆ ಕಿತ್ತೂರು ರಾಣಿ ಚನ್ನಮ್ಮ, ಸಂತ ಸೇವಾಲಾಲ್ ಹಾಗೂ ಪಾಂಡುರಂಗ ವಿಠ್ಠಲನ ಮೂರ್ತಿಗಳು ಸಾರ್ವಜನಿಕರ ಗಮನ ಸೆಳೆದವು. ಈಚೆಗಷ್ಟೇ ಅಂಗಾಂಗ ದಾನ ಮಾಡಿ ಸಾವಿನಲ್ಲೂ ಸಾರ್ಥಕತೆ ಮೆರೆದವರ ಭಾವಚಿತ್ರಗಳು ಮೆರವಣಿಗೆಗೆ ಮೆರುಗು ನೀಡಿದವು. ಅಲ್ಲದೇ ನಗರದ ಪ್ರಮುಖ ವೃತ್ತಗಳು ಮತ್ತು ರಸ್ತೆಗಳಲ್ಲಿ ಕೇಸರಿ ಧ್ವಜ ಹಾಗೂ ಬಂಟಿಂಗ್‌ಗಳನ್ನು ಕಟ್ಟುವ ಮೂಲಕ ಸಂಘಟಕರು ಹಬ್ಬದ ವಾತಾವರಣ ನಿರ್ಮಿಸಿದ್ದರು.

ಮೆರವಣಿಗೆಯಲ್ಲಿ ಗದಗ ಮಾತ್ರವಲ್ಲದೆ ಹುಬ್ಬಳ್ಳಿ, ಬಾಗಲಕೋಟೆ, ಕೊಪ್ಪಳ ಮತ್ತು ಹಾವೇರಿ ಜಿಲ್ಲೆಗಳಿಂದ ಹಿಂದೂ ಸಂಘಟನೆಗಳು ಸಾವಿರಾರು ಕಾರ್ಯಕರ್ತರು ಭಾಗವಹಿಸಿದ್ದರು.

ಕೊರಳಲ್ಲಿ ಕೇಸರಿ ಶಾಲು, ಹಣೆಯಲ್ಲಿ ಕುಂಕುಮ ಧರಿಸಿದ್ದ ಯುವಕರು ಕಿವಿಗಡಚಿಕ್ಕುವ ಡಿಜೆ ಸೌಂಡ್‌ಗೆ ಕುಣಿದು ಕುಪ್ಪಳಿಸಿದರು. ಮೆರವಣಿಗೆಯುದ್ದಕ್ಕೂ 'ಜೈ ಶಿವಾಜಿ', 'ಜೈ ಶ್ರೀರಾಮ್' ಎಂಬ ಘೋಷಣೆಗಳು ಮೊಳಗಿದವು. ಮೆರವಣಿಗೆ ಸಾಗುವ ದಾರಿಯಲ್ಲಿ ವಿವಿಧ ಸಂಘಟನೆಗಳಿಂದ ಸಾರ್ವಜನಿಕರಿಗೆ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು.

ಶಿವಾಜಿ ಜಯಂತಿ ಆಚರಣೆ ವೇಳೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕಾ ಕ್ರಮವಾಗಿ ನಗರದಾದ್ಯಂತ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ಮದ್ಯ ಮಾರಾಟ ನಿಷೇಧಿಸಿ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದರು. ಸಂಜೆಯವರೆಗೂ ಸಾಗಿದ ಮೆರವಣಿಗೆಯು, ಮುನ್ಸಿಪಲ್ ಮೈದಾನದಲ್ಲಿ ಶಾಂತಿಯುತವಾಗಿ ಮುಕ್ತಾಯಗೊಂಡಿತು.

ಒಕ್ಕಲಗೇರಿ ಓಣಿಯ ರಾಚೋಟೇಶ್ವರ ದೇವಸ್ಥಾನದಲ್ಲಿ ಶಿವಾಜಿ ಮಹಾರಾಜರ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಲಾಯಿತು. ಅಲ್ಲಿಂದ ಆರಂಭಗೊಂಡ ಮೆರವಣಿಗೆಯು ಜುಮ್ಮಾ ಮಸೀದಿ, ಬಸವೇಶ್ವರ ವೃತ್ತ, ಹುಯಿಲಗೋಳ ನಾರಾಯಣರಾವ್ ವೃತ್ತದ ಮಾರ್ಗವಾಗಿ ಮುನ್ಸಿಪಲ್ ಕಾಲೇಜು ಮೈದಾನದವರೆಗೆ ಸಾಗಿತು. ರಸ್ತೆಯ ಇಕ್ಕೆಲಗಳಲ್ಲಿ ಹಾಗೂ ಕಟ್ಟಡಗಳ ಮೇಲೇರಿ ಸಾವಿರಾರು ಜನರು ಈ ಭವ್ಯ ಮೆರವಣಿಗೆಯನ್ನು ಕಣ್ತುಂಬಿಕೊಂಡರು.

### ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿದ ಡಿಸಿ ಸಿ.ಎನ್.ಶ್ರೀಧರ್

# ಶಿವಾಜಿ ಮಹಾರಾಜರು ಸ್ವಾಭಿಮಾನದ ಪ್ರತೀಕ

**■ವಿಜಯಸಾಕ್ಷಿ ಸುದ್ದಿ, ಗದಗ**

ಛತ್ರಪತಿ ಶಿವಾಜಿ ಮಹಾರಾಜರು ಶಕ್ತಿಯ ಸಂಕೇತ ಹಾಗೂ ಸ್ವಾಭಿಮಾನದ ಪ್ರತೀಕ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.



ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ಗುರುವಾರ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಛತ್ರಪತಿ ಶಿವಾಜಿ ಅಪ್ಪಟ ದೇಶಪ್ರೇಮಿಯಾಗಿದ್ದರು. ದೇಶ ಕಂಡ ಅಪ್ರತಿಮ ಸಂಘಟನಾಕಾರ. ತಾಯಿ ಜೀಜಾಬಾಯಿಯ ಪ್ರೇರಣೆಯಿಂದ ಶಿವಾಜಿ ಮಹಾರಾಜರು ಸಂಸ್ಕಾರವಂತರಾಗಿ ಆದರ್ಶ ಜೀವನ ನಡೆಸಲು ಕಾರಣವಾಯಿತು. ಜೀಜಾಬಾಯಿಯವರ ಸ್ವರಾಜ್ಯದ ಕನಸು ನನಸು ಮಾಡಿದ ಅಪ್ರತಿಮ ವೀರ ಶಿವಾಜಿ ಮಹಾರಾಜರು. ಶಿವಾಜಿ ಮಹಾರಾಜರ ಜೀವನ ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಉಪನ್ಯಾಸಕರಾದ ಹಿರಿಯ ವಕೀಲ ಸುಧೀರಸಿಂಹ ಘೋರ್ಪಡೆ ಮಾತನಾಡಿ, ಶಿವಾಜಿಯವರ ತತ್ವಗಳು ಒಂದೇ ಸಮುದಾಯಕ್ಕೆ ಅಲ್ಲದೇ ಎಲ್ಲ ಸಮುದಾಯಕ್ಕೆ ಸೀಮಿತವಾಗಿವೆ. ಕ್ರಿ.ಶ 1630ರಲ್ಲಿ ಶಿವನೇರಿ ದುರ್ಗದಲ್ಲಿ ಶಿವಾಜಿ ಮಹಾರಾಜರ ಜನನವಾಗುತ್ತದೆ. ಪರಕೀಯರ ಆಳ್ವಿಕೆಯಲ್ಲಿ ಇರಬಾರದು ಎಂಬುದು ಜೀಜಾಮಾತೆಯು ಬಯಕೆಯಾಗಿತ್ತು. ಶಿವಾಜಿ ಮಹಾರಾಜರು ತಮ್ಮ 13ನೇ ವರ್ಷದಲ್ಲಿ ಸ್ವರಾಜ್ಯ ಸ್ಥಾಪನೆಯ ಕನಸು ಕಂಡು ಮಾವಳಿಯರ, ರೈತರು, ಗುಡ್ಡಗಾಡು ಜನರ ಸಂಘಟನೆಯೊಂದಿಗೆ ಮೊಘಲರ ವಶದಲ್ಲಿರುವ ಕೋಟೆಗಳನ್ನು ವಶಪಡಿಸಿಕೊಂಡರು. ಇವರು ಸಮರ್ಥ ಆಡಳಿತಗಾರರಾಗಿದ್ದರು

ಗೆರಿಲ್ಲಾ ಯುದ್ಧ ನೀತಿ ಅನುಸರಿಸುತ್ತಿದ್ದರು. 1674ರಲ್ಲಿ ರಾಯಗಡದಲ್ಲಿ ಶಿವಾಜಿಯವರಿಗೆ ಪಟ್ಟಾಭಿಷೇಕವಾಯಿತು. ಅವರು 'ಛತ್ರಪತಿ' ಎಂದು ಘೋಷಿಸಿಕೊಂಡರು. ಇದು ಕೇವಲ ಒಬ್ಬ ವ್ಯಕ್ತಿಯ ಪಟ್ಟಾಭಿಷೇಕವಾಗಿರಲಿಲ್ಲ, ಶತಮಾನಗಳ ಪರಕೀಯರ ಆಳ್ವಿಕೆಯ ನಂತರ ಹಿಂದೂ ಸಾಮ್ರಾಜ್ಯವೊಂದು ತಲೆ ಎತ್ತಿ ನಿಂತ ಐತಿಹಾಸಿಕ ಕ್ಷಣವಾಗಿತ್ತು ಎಂದು ಸುಧೀರಸಿಂಹ ಘೋರ್ಪಡೆ ಶಿವಾಜಿ ಮಹಾರಾಜರ ಶೌರ್ಯ, ಪರಾಕ್ರಮ ಸೇರಿದಂತೆ ಜೀವನ ಸಾಧನೆ ಕುರಿತು ವಿವರಿಸಿದರು.

ಎಂದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ. ಬಸವರಾಜ ಜಕ್ಕಲಿ, ಸುರೇಶ ಬೇಂದ್ರೆ, ಕೃಷ್ಣಾಜಿ ತುಕ್ಕಪ್ಪನವರ, ಮುರಿಗೆಪ್ಪ ಶೆಟ್ಟರ್, ಅಜಿತ ಘೋರ್ಪಡೆ, ಯಲ್ಲಪ್ಪ ಬೇಂದ್ರೆ ಸೇರಿದಂತೆ ಸಮಾಜದ ಹಿರಿಯರು, ಮಹಿಳೆಯರು, ಮುಖಂಡರು, ಗಣ್ಯರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ, ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಮುದಾಯದ ಸಾಧಕರಿಗೆ ಗೌರವಿಸಿ ಸನ್ಮಾನಿಸಲಾಯಿತು.

ವೀರಣ್ಣ ಅಂಗಡಿ ಹಾಗೂ ತಂಡದವರು ನಾಡಗೀತೆ ಪ್ರಸ್ತುತಪಡಿಸಿದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು. ಸ್ವರಸಿಂಧು ನೃತ್ಯ ಪ್ರದರ್ಶಿಸಿದರು.

## ವಿಮಲ್‌ಬಾಯಿ ಜೈನ್ ನಿಧನ : ನೇತ್ರದಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಸಿಡಿಓ ಸ್ಕೂಲ್ ಬಳಿಯ ನಿವಾಸಿ ಶ್ರೀಮತಿ ವಿಮಲ್‌ಬಾಯಿ ರಣಮಲ್‌ಜೀ ಜೈನ್ (70) ಅವರು ಫೆ. 19ರಂದು ಗುರುವಾರ ನಿಧನರಾದರು. ಮೃತರಿಗೆ ಪತಿ, ಇಬ್ಬರು ಪುತ್ರರು ಹಾಗೂ ಮೂವರು ಪುತ್ರಿಯರು ಇದ್ದಾರೆ.

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಪ್ರೇರಣೆಯಿಂದ ಕುಟುಂಬಸ್ಥರು ಮೃತರ ನೇತ್ರದಾನ ಮಾಡಲು ಒಪ್ಪಿಗೆ ಸೂಚಿಸಿದ್ದು, ಜಿಮ್ಸ್‌ನ ನೇತ್ರ ತಜ್ಞರ ತಂಡ ನೇತ್ರದಾನ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಕೈಗೊಂಡರು.

ಈ ಸಂದರ್ಭದಲ್ಲಿ ರಣಮಲ್‌ಜೀ ಜೈನ್, ಲಯನ್ಸ್ ಕ್ಲಬ್ ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಖಜಾಂಚಿ ರೇಣುಕಪ್ರಸಾದ ಹಿರೇಮಠ, ಶೈಲೇಶ್ ಶಹಾ, ರಮೇಶ ಶಿಗ್ಲಿ ಹಾಗೂ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

ದಾನಕ್ಕೆ ಮನವಿ : ಮೃತ ವ್ಯಕ್ತಿಯ ನೇತ್ರದಾನ ಹಾಗೂ ದೇಹದಾನ ಮಾಡುವ ಮೂಲಕ ಮಾನವೀಯತೆ ಮೆರೆಯಬೇಕು. ಅಂಧರಿಗೆ ಬೆಳಕು ನೀಡುವ ನೇತ್ರದಾನ ಮತ್ತು ವೈದ್ಯಕೀಯ ವಿದ್ಯಾರ್ಥಿಗಳ ಅಂಗರಚನಾ ಶಾಸ್ತ್ರ ಅಧ್ಯಯನಕ್ಕೆ ಸಹಕಾರಿಯಾಗುವ ದೇಹದಾನ ಕಾರ್ಯದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕ್ಲಬ್ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

## ಅಗಡಿ ಇಂಜಿನಿಯರಿಂಗ್ ಕಾಲೇಜಿಗೆ ಪ್ರಶಸ್ತಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಅಭಿಯಾಂತ್ರಿಕ ಮತ್ತು ತಾಂತ್ರಿಕ ಮಹಾವಿದ್ಯಾಲಯಕ್ಕೆ ಶಿಕ್ಷಣ ತಂತ್ರಜ್ಞಾನ, ಕಲಿಕಾ ಗುಣಮಟ್ಟ, ಪರಿಣಾಮಕಾರಿ ಬೋಧನೆ, ಹುತಾತ್ಮ ಸೈನಿಕರ ಮಕ್ಕಳಿಗೆ ಉಚಿತ ಶಿಕ್ಷಣ, ಆರ್ಥಿಕವಾಗಿ ಹಿಂದುಳಿದ ಮಕ್ಕಳಿಗೆ ಸ್ಕಾಲರಶಿಪ್, ಗ್ರಾಮೀಣ ಪ್ರದೇಶದಲ್ಲಿ ಅತ್ಯಾಧುನಿಕ ತಂತ್ರಜ್ಞಾನ ಶಿಕ್ಷಣ ನೀಡುತ್ತಿರುವ ವಿಶಿಷ್ಟ ಸೇವೆಯನ್ನು ಪರಿಗಣಿಸಿ ಐಎಚ್‌ಇ ಔಟ್‌ಸ್ಟ್ಯಾಂಡಿಂಗ್ ಟೆಕ್ನಿಕಲ್ ಇನ್ಸ್ಟಿಟ್ಯೂಟ್ ಅವಾರ್ಡ್-2026 ಪ್ರಶಸ್ತಿ ಲಭಿಸಿದೆ.

ಬೆಂಗಳೂರಿನ ಭಾರತೀಯ ವಿದ್ಯಾಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಗಡಿ ಕಾಲೇಜಿನ ಪ್ರಾಚಾರ್ಯ ಡಾ. ಪರಶುರಾಮ ಬಾರಕಿಯವರಿಗೆ ಈ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಇದೇ ಸಂದರ್ಭದಲ್ಲಿ ವಿಜ್ಞಾನ-ತಂತ್ರಜ್ಞಾನ ಕ್ಷೇತ್ರದಲ್ಲಿ ಪರಿಣಾಮಕಾರಿ ಕಾರ್ಯ ಚಟುವಟಿಕೆ ಮತ್ತು ಅನುಪಮ ಸೇವೆಯನ್ನು ಪರಿಗಣಿಸಿ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಅವರಿಗೆ ಇಂಟನ್ಯಾಷನಲ್ ಹೌಸ್ ಆಫ್ ಎಜುಕೇಶನ್ ವತಿಯಿಂದ ಐಎಚ್‌ಇ ಅಕಾಡೆಮಿಕ್ ಎಕ್ಸಲೆನ್ಸ್ ಅವಾರ್ಡ್-2026 ಪ್ರಶಸ್ತಿಯನ್ನು ನೀಡಲಾಯಿತು.

ಅಗಡಿ ಸಂಸ್ಥೆಗೆ ಪ್ರಶಸ್ತಿ ಲಭಿಸಿದ್ದಕ್ಕೆ ಅಗಡಿ ಸಂಸ್ಥೆಯ ಚೇರಮನ್ ಹರ್ಷವರ್ಧನ್ ಅಗಡಿ, ವೈಸ್ ಚೇರ್ ಪರ್ಸನ್ ಗೀತಾ ಹೆಚ್.ಅಗಡಿ ಹಾಗೂ ಆಡಳಿತ ಮಂಡಳಿ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ. ಮತ್ತೊಂದು ಪ್ರಶಸ್ತಿಗೆ ಭಾಜನರಾದ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ಅವರಿಗೆ ಆಡಳಿತ ಮಂಡಳಿ ಸದಸ್ಯರು, ಸಂಸ್ಥೆಯ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿದ್ದಾರೆ.

### 'ಸಮರ್ಪಿತ' ಅಭಿನಂದನಾ ಗ್ರಂಥ ಲೋಕಾರ್ಪಣೆ ಸಮಾರಂಭ ಫೆ. 22ಕ್ಕೆ

# ಡಾ. ಜಿ.ಕೆ. ಕಾಳೆಯವರ ಅಮೃತ ಮಹೋತ್ಸವ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಹಿರಿಯ ವೈದ್ಯ ಡಾ. ಜಿ.ಕೆ. ಕಾಳೆ ಮತ್ತು ಅವರ ಅತ್ತಿಗೆ ಭಾಗ್ಯವತಿ ಅನಿಲ ಕಾಳೆಯವರ 75ನೇ ವರ್ಷದ ಅಮೃತ ಮಹೋತ್ಸವದ ಸವಿನೆನಪಿಗಾಗಿ 'ಸಮರ್ಪಿತ' ಅಭಿನಂದನಾ ಗ್ರಂಥದ ಲೋಕಾರ್ಪಣೆ ಕಾರ್ಯಕ್ರಮವು ಫೆ. 22ರ ಬೆಳಿಗ್ಗೆ 10ಕ್ಕೆ ಶ್ರೀ ಕೋಡಿಕೊಪ್ಪದ ವೀರಪ್ಪಜ್ಜನವರ ಮಠದಲ್ಲಿ ಜರುಗಲಿದೆ ಎಂದು ಡಾ. ಕಾಳೆ ಕುಟುಂಬದವರು ಮತ್ತು ಅಭಿಮಾನಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾ. ಜಿ.ಕೆ. ಕಾಳೆಯವರ ವೈದ್ಯಕೀಯ, ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಮತ್ತು ಕೃಷಿ ಸಾಧನೆಗಳು ಮುಂದಿನ ಪೀಳಿಗೆಗೆ ಪರಿಚಯವಾಗಲಿ ಎನ್ನುವ ಉದ್ದೇಶದೊಂದಿಗೆ ಕುಟುಂಬಸ್ಥರು, ಅಭಿಮಾನಿಗಳು ಹಾಗೂ ಹಿತೈಷಿಗಳು ಬರೆದ ಲೇಖನಗಳ ಸರಮಾಲೆ 'ಸಮರ್ಪಿತ' ಎನ್ನುವ ಗ್ರಂಥದ



ಬಿಡುಗಡೆ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಲಿದೆ.

ರೋಣ ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ. ಕಾನೂನು ನ್ಯಾಯ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸದ್ಯೋಮ ಇಲಾಖೆಗಳ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವಾರದ ಡಾ. ಎಚ್.ಕೆ. ಪಾಟೀಲರು ಉದ್ಘಾಟಿಸಲಿದ್ದಾರೆ. ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಅಭಿನಂದನಾ ಗ್ರಂಥವನ್ನು ಲೋಕಾರ್ಪಣೆಗೊಳಿಸಲಿದ್ದಾರೆ.

ಹಾಲಕೆರೆ ಅನ್ನದಾನೇಶ್ವರ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ, ರೋಣ ಗುಲಗಂಜಿ ಮಠದ ಶ್ರೀ ಗುರುಪಾದ ಸ್ವಾಮೀಜಿ, ನರೇಗಲ್ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಶ್ರೀ ಅಭಿನವ ಚನ್ನಬಸವ ಸ್ವಾಮೀಜಿ ಹಾಗೂ ಸಿದ್ದನಕೊಳ್ಳದ ನಿರಂತರ ದಾಸೋಹ ಮಠದ ಡಾ. ಶಿವಕುಮಾರ ಸ್ವಾಮೀಜಿಯವರು ಕಾರ್ಯಕ್ರಮದ ಸಾನ್ನಿಧ್ಯವನ್ನು ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ಕಳಕಪ್ಪ ಜಿ.ಬಂಡಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಸಿದ್ದಪ್ಪ ಜಿ.ಬಂಡಿ, ರವೀಂದ್ರನಾಥ ದೊಡ್ಡಮೇಟಿ ಪಾಲ್ಗೊಳ್ಳಲಿದ್ದಾರೆ. ಬಾಗಲಕೋಟೆಯ ಅನಂತ ಕುಲಕರ್ಣಿ ಹಾಗೂ ಸಂಗಡಿಗರಿಂದ ಸಂಗೀತ ಸೇವೆ ನಡೆಯಲಿದೆ. ನಂತರ ಡಾ. ಜಿ.ಕೆ. ಕಾಳೆಯವರಿಗೆ ಸಂಘ-ಸಂಸ್ಥೆಗಳಿಂದ ಮತ್ತು ಅಭಿಮಾನಿಗಳಿಂದ ಗೌರವ ಸನ್ಮಾನಗಳು ನಡೆಯುತ್ತವೆ ಎಂದು ಕಾಳೆ ಪರಿವಾರದವರು ಮತ್ತು ಅಭಿಮಾನಿ ಬಳಗದವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿವಾಜಿ ಜಯಂತಿ: ಅಪ್ರತಿಮ ವೀರನನ್ನು ಸ್ಮರಿಸಿದ ಕೆಜಿಎಂಎಸ್ ಶಾಲೆ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹಿಂದೂ ಸಾಮ್ರಾಜ್ಯದ ಸಂಸ್ಥಾಪಕ ಶಿವಾಜಿ ಮಹಾರಾಜ ಅಪ್ರತಿಮ ವೀರ ಹಾಗೂ ದೇಶಭಕ್ತನಾಗಿದ್ದನು ಎಂದು ಮುಖ್ಯ ಶಿಕ್ಷಕ ಬಿ.ಬಿ. ಕುರಿ ಹೇಳಿದರು.

ಪಟ್ಟಣದ ಕೆಜಿಎಂಎಸ್ ಶಾಲೆಯಲ್ಲಿ ನಡೆದ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 1630ರ ಫೆಬ್ರುವರಿ 19ರಂದು ಜನಿಸಿದ ಶಿವಾಜಿಯವರ ತಂದೆ ಶಹಾಜಿ ಭೋಸಲೆ ಹಾಗೂ ತಾಯಿ ಜೀಜಾಬಾಯಿ ಆಗಿದ್ದರು. ಗೆರಿಲ್ಲಾ ಯುದ್ಧ ತಂತ್ರವನ್ನು ಅಳವಡಿಸಿಕೊಂಡು ವಿರೋಧಿಗಳನ್ನು ಸೆದೆಬಡಿದ ಧೀರ ರಾಜರಾಗಿದ್ದರು ಎಂದು ಹೇಳಿದರು.

1674ರಲ್ಲಿ ರಾಯಗಢ ಕೋಟೆನಲ್ಲಿ ಪಟ್ಟಾಭಿಷೇಕ ಮಾಡಿಸಿಕೊಂಡ ಅವರು "ಛತ್ರಪತಿ" ಎಂಬ ಬಿರುದನ್ನು ಪಡೆದರು. ಜೀಜಾಬಾಯಿ ಅವರು ಕೇವಲ ತಾಯಿಯಷ್ಟೇ ಅಲ್ಲ, ಶಿವಾಜಿಗೆ ಗುರುವಾಗಿಯೂ ಮಾರ್ಗದರ್ಶನ ನೀಡಿದರು. ಜೀವನದ ಬಹುತೇಕ ಪಾಠಗಳನ್ನು ತಾಯಿಯಿಂದಲೇ ಕಲಿತ ಶಿವಾಜಿ ಧೀರ ಹಾಗೂ ಶೂರನಾಗಿ ಬೆಳೆದರು. ಹಿಂದೂ ಸಾಮ್ರಾಜ್ಯದ ಕನಸನ್ನು ಶಿವಾಜಿಯಲ್ಲಿ ಬಿತ್ತಿದವರು ಜೀಜಾಬಾಯಿ ಎಂದು ಕುರಿ ತಿಳಿಸಿದರು.

ದಕ್ಷ ಹಾಗೂ ನ್ಯಾಯಸಮ್ಮತ ಆಡಳಿತಕ್ಕೆ ಹೆಸರಾಗಿದ್ದ ಶಿವಾಜಿ, ಧೈರ್ಯವನ್ನು ತಮ್ಮ ತಂದೆ ಶಹಾಜಿಯವರಿಂದ ಬಳುವಳಿಯಾಗಿ ಪಡೆದಿದ್ದರು. ಮೊಗಲರು ಹಾಗೂ ಆದಿಲ್‌ಶಾಹಿಗಳ ವಿರುದ್ಧ ಹೋರಾಡಿ ಜಯಗಳಿಸಿ ಸ್ವರಾಜ್ಯವನ್ನು ಕಟ್ಟಿ ಬೆಳೆಸಿದರು ಎಂದರು. ಅವರ ಧೈರ್ಯ ಮತ್ತು ಸ್ಥೈರ್ಯವನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ವಿದ್ಯಾರ್ಥಿಗಳು ಧೈರ್ಯವಂತರಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಶಾಲಾ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

**ಫೆ. 20ರಂದು ಜಿಲ್ಲಾಡಳಿತದಿಂದ ಶ್ರೀ ಸಂತ ಕವಿ ಸರ್ವಜ್ಞ ಜಯಂತಿ ಆಚರಿಸುತ್ತಿರುವ ನಿಮಿತ್ತ ವಿಶೇಷ ಲೇಖನ**

# ತ್ರಿಪದಿಗಳ ಸರದಾರ ಸಂತ ಕವಿ ಸರ್ವಜ್ಞ

ಕನ್ನಡ ಸಾಹಿತ್ಯ ಲೋಕದಲ್ಲಿ ಜನಸಾಮಾನ್ಯರ ಆಡುಭಾಷೆಯಲ್ಲಿಯೇ ಬದುಕಿನ ಸತ್ಯಗಳನ್ನು ಸಾರಿದ ಅಪ್ರತಿಮ ದಾರ್ಶನಿಕ, ಸಮಾಜ ಸುಧಾರಕ ಮತ್ತು ಮಹಾನ್ ಕವಿ ಎಂದರೆ ಅದು ಸರ್ವಜ್ಞ, ತಾನು ಕೇವಲ ಒಬ್ಬ ವ್ಯಕ್ತಿಯಲ್ಲ, ಅದೊಂದು ಜ್ಞಾನದ ಸಂಕೇತ ಎಂದು ಸಾರಿದ ಮಹಾನ್ ಚೇತನವಿದು. ಪ್ರತಿ ವರ್ಷ ಆಚರಿಸುವ ಸರ್ವಜ್ಞ ಜಯಂತಿ ಕೇವಲ ಒಬ್ಬ ಕವಿಯ ಹುಟ್ಟುಹಬ್ಬವಲ್ಲ, ಅದೊಂದು ವೈಚಾರಿಕತೆಯ ಉತ್ಸವ.

ಸರ್ವಜ್ಞನ ಕಾಲಮಾನ ಮತ್ತು ವೈಯಕ್ತಿಕ ಜೀವನದ ಬಗ್ಗೆ ನಿಖರವಾದ ಐತಿಹಾಸಿಕ ದಾಖಲೆಗಳಿಗಿಂತ ಹೆಚ್ಚಾಗಿ, ಆತನ ತ್ರಿಪದಿಗಳಲ್ಲಿ ಸಿಗುವ ಸುಳಿವುಗಳೇ ನಮಗೆ ಆಧಾರ. ಸುಮಾರು 16ನೇ ಶತಮಾನದಲ್ಲಿ ಜೀವಿಸಿದ್ದಿರಬಹುದಾದ ಸರ್ವಜ್ಞ, ಇವನ ಮೂಲ ಹೆಸರು ಪುಷ್ಪದತ್ತ ಎನ್ನಲಾಗುತ್ತದೆ. ಆದರೆ ಲೋಕಸಂಚಾರ ಮಾಡುತ್ತಾ, ಅನುಭವದ ಮೂಸೆಯಲ್ಲಿ ಬೆಂದು, ಜ್ಞಾನವನ್ನೇ ಉಸಿರಾಗಿಸಿಕೊಂಡು ಆತ 'ಸರ್ವಜ್ಞ'ನಾಗಿ ರೂಪುಗೊಂಡ ಪರಿ ಅನನ್ಯ.

ಸರ್ವಜ್ಞನ ಕಾವ್ಯದ ವಿಶೇಷವೆಂದರೆ 'ತ್ರಿಪದಿ' (ಮೂರು ಸಾಲಿನ ಪದ್ಯಗಳು). ಇವು ನೋಡಲು ಚಿಕ್ಕದಾದರೂ, ಇವುಗಳ ಅರ್ಥವ್ಯಾಪ್ತಿ ಸಾಗರದಷ್ಟು ವಿಶಾಲ. ವೇದ, ಉಪನಿಷತ್ತುಗಳಲ್ಲಿ ಅಡಗಿರುವ ಗಹನವಾದ ತತ್ವಗಳನ್ನು ಸಾಮಾನ್ಯ ರೈತನಿಗೂ, ಕೂಲಿ ಕಾರ್ಮಿಕನಿಗೂ ಅರ್ಥವಾಗುವಂತೆ ಸರಳ ಕನ್ನಡದಲ್ಲಿ ಹೇಳಿದ ಕೀರ್ತಿ ಸರ್ವಜ್ಞನಿಗೆ ಸಲ್ಲುತ್ತದೆ. ಅವನ ತ್ರಿಪದಿಗಳು ನೆನಪಿಟ್ಟುಕೊಳ್ಳಲು ಸುಲಭ ಮತ್ತು ಹಾಡಲು ಇಂಪಾಗಿವೆ. ಇಂದಿಗೂ ಹಳ್ಳಿಗಳ ಕಟ್ಟೆಗಳಲ್ಲಿ, ರೈತರ ಬಾಯಲ್ಲಿ ಸರ್ವಜ್ಞನ ವಚನಗಳು ನಾಲಿಗೆಯ ತುದಿಯಲ್ಲಿ ನಲಿದಾಡುತ್ತವೆ.

ಸರ್ವಜ್ಞ ಕೇವಲ ಕವಿಯಾಗಿರಲಿಲ್ಲ, ಅವನು ಒಬ್ಬ ಕಟು ಸಮಾಜ ಸುಧಾರಕನಾಗಿದ್ದನು. ಅಂದಿನ ಸಮಾಜದಲ್ಲಿ ಬೇರೂರಿದ್ದ ಜಾತಿ ಪದ್ಧತಿ, ಮೂಢನಂಬಿಕೆ, ಮತ್ತು ಡಾಂಭಿಕ ಆಚರಣೆಗಳ ವಿರುದ್ಧ ತನ್ನ ತ್ರಿಪದಿಗಳ ಮೂಲಕ ಚಾಟಿ ಬೀಸಿದ್ದನು.

**ನಡೆಯುವವನೊಬ್ಬನೇ,**
**ನುಡಿಯುವವನೊಬ್ಬನೇ**
**ಕಡೆಯೊಳಗೆ ಇಬ್ಬರ ಕುಲವೊಂದೇ,**
**ಎಲೆ ಹೂವ**
ಮುಡಿದವನೇ ಬೇರೆ ಸರ್ವಜ್ಞ ॥

ಮನುಷ್ಯರ ನಡೆ, ನುಡಿ ಒಂದೇ ಆಗಿರುವಾಗ, ಹುಟ್ಟು ಸಾವು ಒಂದೇ ಆಗಿರುವಾಗ ಜಾತಿ ಎಲ್ಲಿಂದ ಬಂತು ಎಂದು ಪ್ರಶ್ನಿಸುವ ಮೂಲಕ ಮಾನವೀಯತೆಯೇ ಶ್ರೇಷ್ಠ ಧರ್ಮ ಎಂದು ಸಾರಿದನು. ಅದೇ ರೀತಿ ಡಾಂಭಿಕ ಭಕ್ತಿಯನ್ನೂ ಅವನು ಟೀಕಿಸುತ್ತಾನೆ. ಮನ ಶುದ್ಧಿಯಿಲ್ಲದೆ, ಕೇವಲ



ವಿಗ್ರಹಗಳಿಗೆ ಪೂಜೆ ಮಾಡುವುದರಿಂದ ಮೋಕ್ಷ ಸಿಗುವುದಿಲ್ಲ ಎನ್ನುವುದು ಅವನ ವಾದವಾಗಿತ್ತು. "ಮೂರ್ಖಂಗೆ ಬುದ್ಧಿಯನು ನೂರ್ಕಾಲ ಹೇಳಿದರು, ಗೋರ್ಕಲ್ಲ ಮೇಲೆ ಮಳೆಗರೆದರೆ ಆ ಕಲ್ಲು ನೀರ ಕುಡಿಯುವದೇ ಸರ್ವಜ್ಞ?" ಎಂದು ಕೇಳುವ ಮೂಲಕ ಬದಲಾಗದ ಮನಸ್ಸುಗಳಿಗೆ ಬುದ್ಧಿ ಹೇಳುವುದು ವ್ಯರ್ಥ ಎಂದು ಮಾರ್ಮಿಕವಾಗಿ ತಿಳಿಸುತ್ತಾನೆ.

ಸರ್ವಜ್ಞನು ಹಸಿವಿನ ಬೆಲೆಯನ್ನು ಅರಿತವನು. ಸಂಚಾರಿಯಾಗಿದ್ದ ಅವನು ಭಿಕ್ಷೆ ಬೇಡಿ ಬದುಕಿದವನು. ಹಾಗಾಗಿ ಅನ್ನದಾನದ ಮಹತ್ವವನ್ನು ಅವನು ಎತ್ತಿ ಹಿಡಿದಿದ್ದಾನೆ. "ಅನ್ನ ದೇವ, ಅನ್ನವೇ ಜೀವ" ಎನ್ನುತ್ತಾ, ಹಸಿದವರಿಗೆ ಅನ್ನ ನೀಡುವುದೇ ನಿಜವಾದ ದೇವರ ಸೇವೆ ಎಂದು ಪ್ರತಿಪಾದಿಸಿದನು.

**ಅನ್ನದಾನವ ಮಾಡು, ನನ್ನಿಯನು**
**ನುಡಿವವನು**
**ತನ್ನಗಳವನು ಮೀರಿ ನಡೆಯದವನಿಹ**
**ಪರದ**
ಮನ್ನಣೆಯ ಗಳಿಸುವನು ಸರ್ವಜ್ಞ ॥

ಅನ್ನದಾನ ಮಾಡುವುದು, ಸತ್ಯವನ್ನೇ ನುಡಿಯುವುದು ಮತ್ತು ತನ್ನ ಮಿತಿಯನ್ನು ಮೀರಿ ನಡೆಯದಿರುವುದು –ಇವು ಮನುಷ್ಯನಿಗೆ ಇಹ–ಪರಗಳೆರಡರಲ್ಲೂ ಗೌರವ ತಂದುಕೊಡುತ್ತವೆ ಎಂಬುದು ಅವನ ಸಿದ್ಧಾಂತವಾಗಿತ್ತು.

ಇಂದು ನಾವು ಆಧುನಿಕ ತಂತ್ರಜ್ಞಾನದ ಯುಗದಲ್ಲಿದ್ದರೂ, ಸರ್ವಜ್ಞನ ವಿಚಾರಗಳು ಇಂದಿಗೂ ಪ್ರಸ್ತುತ. ಸಮಾಜದಲ್ಲಿ ಇನ್ನೂ ಜೀವಂತವಾಗಿರುವ ಜಾತಿ ವಿಷಬೀಜ, ಧಾರ್ಮಿಕ ಅಸಹಿಷ್ಣುತೆ, ಮತ್ತು ಮೌಲ್ಯಗಳ ಕುಸಿತವನ್ನು ಸರಿಪಡಿಸಲು ಸರ್ವಜ್ಞನ ತ್ರಿಪದಿಗಳು 'ದಿಕ್ಸೂಚಿ'ಯಂತೆ ಕೆಲಸ ಮಾಡುತ್ತವೆ. ನಮ್ಮ ಶಿಕ್ಷಣ ವ್ಯವಸ್ಥೆ ಕೇವಲ ಪುಸ್ತಕದ ಜ್ಞಾನ ನೀಡುತ್ತಿದೆ, ಆದರೆ ಸರ್ವಜ್ಞ ಹೇಳಿದ "ಅನುಭವದ ಶಿಕ್ಷಣ" ನಮಗೆ ಬೇಕಿದೆ. "ಮಾತು ಬಲ್ಲವನಿಗೆ ಜಗಳವಿಲ್ಲ, ಊಟ ಬಲ್ಲವನಿಗೆ ರೋಗವಿಲ್ಲ" ಎಂಬ ಅವನ ಮಾತು ಇಂದಿನ ಒತ್ತಡದ ಬದುಕಿಗೆ ಮತ್ತು ಆರೋಗ್ಯಕ್ಕೆ ಸಂಜೀವಿನಿಯಂತಿದೆ.

ಒಟ್ಟಾರೆಯಾಗಿ ಹೇಳುವುದಾದರೆ, ಸರ್ವಜ್ಞ ಕನ್ನಡ ನಾಡು ಕಂಡ ಅಪ್ರತಿಮ "ಲೋಕ ಗುರು". ಅವನು ಯಾವುದೇ ಒಂದು ಧರ್ಮಕ್ಕೆ ಅಥವಾ ವರ್ಗಕ್ಕೆ ಸೀಮಿತವಾದವನಲ್ಲ. ಅವನ ತ್ರಿಪದಿಗಳು ವಿಶ್ವಮಾನವ ಸಂದೇಶವನ್ನು ಸಾರುತ್ತವೆ. ಸರ್ವಜ್ಞ ಜಯಂತಿಯ ಈ ಶುಭ ಸಂದರ್ಭದಲ್ಲಿ, ನಾವು ಕೇವಲ ಅವನ ಫೋಟೋಗೆ ಪೂಜೆ ಸಲ್ಲಿಸಿದರೆ ಸಾಲದು; ಅವನ ವಿಚಾರಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಸತ್ಯ, ನಿಷ್ಠೆ, ಮತ್ತು ಮಾನವೀಯತೆಯ ದಾರಿಯಲ್ಲಿ ನಡೆಯುವುದೇ ನಾವು ಆ ಮಹಾನ್ ಚೇತನಕ್ಕೆ ಸಲ್ಲಿಸುವ ನಿಜವಾದ ಗೌರವ.

**– ಯುವರಾಜ ಸಿ.ಎಲಿಗಾರ.**
ಪ್ರ–ಶಿಕ್ಷಣಾರ್ಥಿ, ವಾರ್ತಾ ಮತ್ತು ಸಾ.ಸಂ.ಇ ಗದಗ.

## ಮನರೇಗಾ ಯೋಜನೆ ಹೆಸರು ಬದಲಾವಣೆ ವಿರೋಧಿಸಿ ಕಾಂಗ್ರೆಸ್ ಪಾದಯಾತ್ರೆ




■ **ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಬ್ಲಾಕ್ ಕಾಂಗ್ರೆಸ್ ವತಿಯಿಂದ ಮನರೇಗಾ (ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ) ಹೆಸರನ್ನು "ವಿ ಬಿ ಜಿ ರಾಮ್ ಜಿ" ಎಂದು ಬದಲಾಯಿಸಿರುವುದನ್ನು ಖಂಡಿಸಿ ತೀವ್ರ ವಿರೋಧ ಪ್ರತಿಭಟನೆ ಹಾಗೂ ಪಾದಯಾತ್ರೆ ನಡೆಸಲಾಯಿತು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೋರಿ ಗೋಣಿಬಸಪ್ಪ ಅವರ ನೇತೃತ್ವದಲ್ಲಿ ಅಂಬೇಡ್ಕರ್ ವೃತ್ತದಿಂದ ಬಸವೇಶ್ವರ ವೃತ್ತದವರೆಗೆ ಪಾದಯಾತ್ರೆ ನಡೆಸಿ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಲಾಯಿತು.

2005ರಲ್ಲಿ ಮಾಜಿ ಪ್ರಧಾನಮಂತ್ರಿ ಮನಮೋಹನ ಸಿಂಗ್ ಅವರ ನೇತೃತ್ವದ ಯುಪಿಎ ಸರ್ಕಾರದ ಅವಧಿಯಲ್ಲಿ ಗ್ರಾಮೀಣ ಭಾಗದ ಬಡ ಕೂಲಿಕಾರ್ಮಿಕರ ಹಿತ ದೃಷ್ಟಿಯಿಂದ ಮನರೇಗಾ ಯೋಜನೆ ಜಾರಿಗೆ ತರಲಾಗಿತ್ತು. ಗ್ರಾಮ ಪಂಚಾಯಿತಿಗಳ ಮೂಲಕ ಗ್ರಾಮಾಭಿವೃದ್ಧಿಗೆ ಪೂರಕವಾಗಿ ಯೋಜನೆ ಪರಿಣಾಮಕಾರಿಯಾಗಿ ಜಾರಿಯಾಗುತ್ತಿತ್ತು ಎಂದು ಪ್ರತಿಭಟನಾಕಾರರು ತಿಳಿಸಿದರು.

ಇದೀಗ ಕೇಂದ್ರದಲ್ಲಿ ಅಧಿಕಾರದಲ್ಲಿರುವ ಭಾರತೀಯ ಜನತಾ ಪಕ್ಷದ ಸರ್ಕಾರ, ಮಹಾತ್ಮ ಗಾಂಧಿಯವರ ಹೆಸರನ್ನು ತೆಗೆದು ಯೋಜನೆಯ ಹೆಸರನ್ನು ಬದಲಾಯಿಸಿರುವುದನ್ನು ಖಂಡಿಸಿದ ಮುಖಂಡರು, ಗ್ರಾಮ ಪಂಚಾಯಿತಿಗಳ ಯೋಜನಾ ರೂಪಿಸುವ ಅಧಿಕಾರವನ್ನು ಕಡಿತಗೊಳಿಸಿ, 60% ಕೇಂದ್ರ ಮತ್ತು 40% ರಾಜ್ಯ ಅನುದಾನದ ಮಾದರಿಯನ್ನು ಕಡ್ಡಾಯಗೊಳಿಸುವ ಮೂಲಕ ರಾಜ್ಯಗಳ ಮೇಲೆ ಆರ್ಥಿಕ ಹೊರೆ ಹಾಕಲಾಗುತ್ತಿದೆ ಎಂದು ಆರೋಪಿಸಿದರು.

ಹೋರಾಟವನ್ನು ಉದ್ದೇಶಿಸಿ ಮಾತನಾಡಿದ ಕೆಪಿಸಿಸಿ ಸದಸ್ಯರು ಹಾಗೂ ವಿಜಯನಗರ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಕುರಿ ಶಿವಮೂರ್ತಿ, ಕೇಂದ್ರ ಸರ್ಕಾರ ತನ್ನ ಅವಧಿಯಲ್ಲಿ ಹೊಸ ಯೋಜನೆಗಳನ್ನು ಜಾರಿಗೊಳಿಸಲು ವಿಫಲವಾಗಿದೆ. ಹಳೆಯ ಯೋಜನೆಗಳ ಹೆಸರು ಬದಲಾಯಿಸುವ ಮೂಲಕ ದ್ವೇಷ ರಾಜಕಾರಣ ನಡೆಸುತ್ತಿದೆ. ಅಧಿಕಾರ ಶಾಶ್ವತವಲ್ಲ ಎನ್ನುವುದನ್ನು ಪ್ರಧಾನಿ ನರೇಂದ್ರ ಮೋದಿ ಮನಗಾಣಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಅಕ್ಕಿ ತೋಟೇಶ್, ಹಿರಿಯ ಕಾಂಗ್ರೆಸ್ ಮುಖಂಡ ಹೆಗ್ಡಳ್ ರಾಮಣ್ಣ, ಪುರಸಭೆ ಅಧ್ಯಕ್ಷ ಮರಿರಾಮಣ್ಣ, ಪಕ್ಷದ ವಕ್ತಾರ ಪತ್ರೇಶ್ ಹಿರೇಮಠ್, ಪ್ರಚಾರ ಸಮಿತಿ ಅಧ್ಯಕ್ಷ ನಂದಿಬಂಡಿ ಸೋಮಣ್ಣ, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ದೇವೇಂದ್ರಪ್ಪ ಚಿಂತ್ರಪಳ್ಳಿ ಸೇರಿದಂತೆ ಅನೇಕ ಮುಖಂಡರು ಮಾತನಾಡಿದರು.

ಈ ಸಂದರ್ಭದಲ್ಲಿ ಹಲವು ಸ್ಥಳೀಯ ಮುಖಂಡರು, ಪದಾಧಿಕಾರಿಗಳು, ಯುವ ಕಾರ್ಯಕರ್ತರು ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಭಾಗವಹಿಸಿ ಪ್ರತಿಭಟನೆ ಯಶಸ್ವಿಗೊಳಿಸಿದರು.

## ಸಮಾಜಮುಖಿ ಕಾರ್ಯದಿಂದ ಸಂತೃಪ್ತಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ಜನಮುಖಿ ಹಾಗೂ ಸಮಾಜಮುಖಿಯಾಗಿ ಕಾರ್ಯ ಮಾಡುವ ವ್ಯಕ್ತಿ ವಯಕ್ತಿಯವಾಗಿ ಸಂತೃಪ್ತಿಯ ಭಾವವನ್ನು ಹೊಂದಿದ್ದರೆ, ಅಂತಹ ವ್ಯಕ್ತಿ ಸಮಾಜದಲ್ಲಿ ಜನಮನ್ನಣೆಗೆ ಪಾತ್ರನಾಗುತ್ತಾನೆ ಎಂದು ಗದುಗಿನ ಸರ್ಕಾರಿ ಪ್ರಥಮದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಪ್ರಾಂಶುಪಾಲ ಡಾ. ಶಿವಪ್ಪ ಕುರಿ ಹೇಳಿದರು.

ಅವರು ಬುಧವಾರ ಬೆಟಗೇರಿಯ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಸಭಾಂಗಣದಲ್ಲಿ ಆರ್. ಆರ್. ಕಾಶಪ್ಪನವರ ಅವರು ಸೇವಾ ನಿವೃತ್ತರಾದ ನಿಮಿತ್ತ ಏರ್ಪಡಿಸಿದ್ದ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರ್ಕಾರಿ ಸೇವೆಯಲ್ಲಿರುವವರು ತಮ್ಮ ಕರ್ತವ್ಯವನ್ನು ಸರಿಯಾಗಿ ನಿಭಾಯಿಸುವ ಮೂಲಕ ಆತ್ಮತೃಪ್ತಿಯನ್ನು ಹೊಂದಬೇಕು. ಕರ್ತವ್ಯದೊಂದಿಗೆ ಶೈಕ್ಷಣಿಕ, ಸಾಮಾಜಿಕ, ಧಾರ್ಮಿಕ ಕ್ಷೇತ್ರದಲ್ಲೂ ಆಸಕ್ತಿ ಹೊಂದಿ ಕಾರ್ಯ ನಿರ್ವಹಿಸಬೇಕು. ಆರ್.ಆರ್. ಕಾಶಪ್ಪನವರ ಆರಂಭದಲ್ಲಿ ಇಲ್ಲಿ ಸೇವೆ ಸಲ್ಲಿಸಿ ಮೇಲಾಧಿಕಾರಿಗಳ ಮೆಚ್ಚುಗೆಗೆ ಪಾತ್ರರಾದವರು. ಅವರಿನ್ನು ಸಂಪೂರ್ಣವಾಗಿ ಸಾಮಾಜಿಕ ಕಾರ್ಯದಲ್ಲಿ ತೊಡಗಿಕೊಳ್ಳುವಂತಾಗಲಿ ಎಂದರು.

ಪ್ರೊ. ಪಿ. ಕೇಶವ, ಡಾ. ವಿರೂಪಾಕ್ಷಿ ಮುಳಗುಂದ, ಡಾ. ಕಸ್ತೂರಿ ದಳವಾಯಿ, ಡಾ. ಹನಮಂತಪ್ಪ ಕಲ್ಮನಿ, ಪ್ರೊ. ಖಲೀಲಅಹ್ಮದ್ ಚಿಕ್ಕೇರೂರ, ಆರ್.ಆರ್. ಕಾಶಪ್ಪನವರರ ಕರ್ತವ್ಯ ನಿರ್ವಹಣೆ, ವ್ಯಕ್ತಿತ್ವವನ್ನು ಬಣ್ಣಿಸಿದರು.

ಆರ್.ಆರ್. ಕಾಶಪ್ಪನವರ ಹಾಗೂ ಸುಮಿತ್ರಾ ದಂಪತಿಯನ್ನು ಕಾಲೇಜಿನ ಆಡಳಿತ ಸಿಬ್ಬಂದಿ ವರ್ಗದವರು ಹಾಗೂ ಗೆಳೆಯರ ಬಳಗದವರು ಸನ್ಮಾನಿಸಿ ಗೌರವಿಸಿದರು.ಕವಿತಾ ಜಂಗವಾಡ ಪ್ರಾರ್ಥಿಸಿದರು, ಅಶ್ವಿನಿ ಉಪ್ಪಿನ ಸ್ವಾಗತಿಸಿ ಪರಿಚಯಿಸಿದರು. ಡಾ. ಕಸ್ತೂರಿ ದಳವಾಯಿ ನಿರೂಪಿಸಿದರು. ಜ್ಯೋತಿ ಬೋಳಣ್ಣವರ ವಂದಿಸಿದರು.

# ನನ್ನ ಬಾಬಾ – ನನ್ನ ನಿಜವಾದ ಹೀರೋ...!

ನನ್ನ ತಂದೆಯೇ ನನ್ನ ದೇವರು. ನಾನು 1990ರ ಮಾರ್ಚ್‌ನಲ್ಲಿ ಹುಟ್ಟಿದಾಗ ನಮ್ಮ ಜೀವನ ತುಂಬಾ ಕಷ್ಟಕರವಾಗಿತ್ತು. ಬದುಕು ಒಂದು ಹೋರಾಟವಾಗಿತ್ತು. ಆ ಸಂಕಷ್ಟದ ಸಮಯದಲ್ಲಿ ನನ್ನ ತಂದೆ–ತಾಯಿಯವರು ನನ್ನನ್ನು ಉಳಿಸಿ, ಬೆಳೆಸಿ, ಇಂದು ಈ ಮಟ್ಟಿಗೆ ತಂದು ನಿಲ್ಲಿಸಿದರು. ಅವರ ತ್ಯಾಗ, ಪ್ರೀತಿ ಮತ್ತು ಬೆಂಬಲಕ್ಕೆ ನಾನು ಸದಾ ಋಣಿಯಾಗಿದ್ದೇನೆ. ಅವರಿಗೆ ಹೃದಯಪೂರ್ವಕ ನಮಸ್ಕಾರಗಳು.

ನಾನು ಚಿಕ್ಕವನಾಗಿದ್ದಾಗಲೇ ತಂದೆಯವರ ಅಪಾರ ಪ್ರೀತಿಯನ್ನು ಅನುಭವಿಸಿದ್ದೇನೆ. ನನ್ನ ಕಷ್ಟದ ಸಮಯದಲ್ಲೂ, ಸುಖದ ಸಮಯದಲ್ಲೂ ಅವರು ನನ್ನ ಜೊತೆಯಲ್ಲಿ ನಿಂತು ಧೈರ್ಯ ಮತ್ತು ಪ್ರೋತ್ಸಾಹ ನೀಡಿದ್ದಾರೆ. ನಾನು ಕುಗ್ಗಿದಾಗ ಎತ್ತಿ ನಿಲ್ಲಿಸಿದವರು, ನಾನು ಮುಂದುವರಿಯಲು ಶಕ್ತಿ ತುಂಬಿದವರು ನನ್ನ ತಂದೆಯವರೇ. ಅಂತಹ ದೇವರಂತ ಮಹಾನ್ ತಂದೆಯನ್ನು ಪಡೆದಿರುವುದು ನನ್ನ ಜೀವನದ ದೊಡ್ಡ ಭಾಗ್ಯ.



ನನ್ನ ತಂದೆಯವರು ಎಂಬಿಬಿಎಸ್ ಪೂರ್ಣಗೊಳಿಸಿ, ಹೆಚ್ಚಿನ ವಿದ್ಯಾಭ್ಯಾಸ ಮಾಡಿ ನಮ್ಮ ಊರಿಗೆ ಸೇವೆ ಮಾಡಲು ಬಂದರು. ಅವರು ಆಸ್ಪತ್ರೆಯಲ್ಲಿ ಪ್ರಾಮಾಣಿಕವಾಗಿ, ಮಾನವೀಯತೆಯಿಂದ ಚಿಕಿತ್ಸೆ ನೀಡಿ ಜನಮನಗಳಲ್ಲಿ ವಿಶೇಷ ಸ್ಥಾನ ಗಳಿಸಿದರು. ಅವರ ಸೇವಾಭಾವ, ಶ್ರಮ ಮತ್ತು ತ್ಯಾಗವನ್ನು ನೋಡುತ್ತಾ ನಾನು ಬೆಳೆದಿದ್ದೇನೆ. ನಾನು ಸಾಧಿಸಿರುವ ಪ್ರತಿಯೊಂದು ಯಶಸ್ಸಿನ ಹಿಂದೆ ಅವರ ಮಾರ್ಗದರ್ಶನ ಮತ್ತು ಆಶೀರ್ವಾದವೇ ಕಾರಣ.

ಅವರು ಕೇವಲ ವೈದ್ಯರಲ್ಲ; ಶಿಕ್ಷಣ, ಸಮಾಜ ಮತ್ತು ರಾಜಕೀಯ ಕ್ಷೇತ್ರಗಳಲ್ಲಿಯೂ ತಮ್ಮ ನಿಸ್ವಾರ್ಥ ಸೇವೆಯಿಂದ ಹೆಸರು ಮಾಡಿದ ವ್ಯಕ್ತಿ. ನೇರ ನಿಲುವು, ಅಚಲ ಸಿದ್ಧಾಂತಗಳು ಮತ್ತು ಶಿಸ್ತಿನ ಜೀವನವೇ ಅವರ ಗುರುತು. ಯಾವುದೇ ಸಂದರ್ಭದಲ್ಲೂ ತಮ್ಮ ಮೌಲ್ಯಗಳನ್ನು ಬಿಡದೆ ಬದುಕಿದವರು.

2009ರಲ್ಲಿ ನಮ್ಮ ಅಜ್ಜಿಯವರು ನಿಧನರಾದಾಗ ಮನೆ ತುಂಬಾ ದುಃಖದಲ್ಲಿ ಮುಳುಗಿತ್ತು. ಆದರೆ ತಂದೆಯವರು ಧೈರ್ಯದಿಂದ ನಿಂತು ಎಲ್ಲರಿಗೂ ಶಕ್ತಿ ತುಂಬಿದರು. 2010ರ ಮಾರ್ಚ್‌ನಲ್ಲಿ ನಮ್ಮ ದೊಡ್ಡಪ್ಪರಾದ ಪ್ರೋ. ಅನಿಲ್ ಕಾಳೆ ಅವರು ಅಗಲಿದಾಗಲೂ ಅವರು ಆ ನೋವನ್ನು ಸಹಿಸಿಕೊಂಡು ಕುಟುಂಬದ ಹೊಣೆಗಾರಿಕೆಯನ್ನು ಧೈರ್ಯದಿಂದ ನಿರ್ವಹಿಸಿದರು.

ನಮ್ಮ ಶಿಕ್ಷಣಕ್ಕಾಗಿ ತಂದೆ–ತಾಯಿಯವರು ಅಪಾರ ಕಷ್ಟಪಟ್ಟಿದ್ದಾರೆ. ನನ್ನ ಶಿಕ್ಷಣ ಮುಗಿದ ನಂತರ ಅವರು ನನ್ನಿಗಾಗಿ ಒಂದು ಚಿಕ್ಕ ಉದ್ಯಮವನ್ನು ಸ್ಥಾಪಿಸಿ ಕೊಟ್ಟರು. ಅವರ ಆಶೀರ್ವಾದದಿಂದಲೇ ಇಂದು ನಾನು ಲೋಕಾಪುರದಲ್ಲಿ ಸ್ವಂತ ಉದ್ಯಮಿಯಾಗಿ ನಿಂತಿದ್ದೇನೆ.

2019ರ ಅಕ್ಟೋಬರ್ 8ರಂದು ತಾಯಿಯವರನ್ನು ಕಳೆದುಕೊಂಡ ನೋವು ನಮ್ಮ ಕುಟುಂಬಕ್ಕೆ ದೊಡ್ಡ ಆಘಾತವಾಗಿತ್ತು. ಆ ಸಂದರ್ಭದಲ್ಲಿ ತಂದೆಯವರು ತುಂಬಾ ದುಃಖಗೊಂಡರೂ, ತಮ್ಮ ನೋವನ್ನು ಒಳಗೇ ಮುಚ್ಚಿಕೊಂಡು ನಮ್ಮ ಭವಿಷ್ಯಕ್ಕಾಗಿ ದುಡಿದರು. ನಮ್ಮ ಕಣ್ಣೀರನ್ನು ತೊಳೆದು ನಮ್ಮ ಜೀವನಕ್ಕೆ ಬೆಳಕು ನೀಡಲು ಪ್ರಯತ್ನಿಸಿದರು. ಇಂದು ನಾವು ಮುಂದೆ ಸಾಗುತ್ತಿದ್ದರೆ, ಅದರ ಹಿಂದೆ ಇರುವ ಶಕ್ತಿ ನಮ್ಮ ತಂದೆಯ ತ್ಯಾಗವೇ.

ತಾಯಿಯವರ ಅಗಲಿಕೆಯ ನಂತರ ನಮ್ಮ ದೊಡ್ಡಮ್ಮ ಶ್ರೀಮತಿ ಭಾಗ್ಯವತಿ ಅವರು ನಮ್ಮೆಲ್ಲರನ್ನು ತಮ್ಮ ಮಕ್ಕಳಂತೆ ನೋಡಿಕೊಂಡರು. ಅವರ ಪ್ರೀತಿ ಮತ್ತು ಆರೈಕೆ ನಮ್ಮ ಕುಟುಂಬಕ್ಕೆ ಮತ್ತೊಂದು ಆಧಾರವಾಯಿತು.

ನಾವು ಎಲ್ಲರೂ – ಅಣ್ಣ, ಅಕ್ಕ, ನಾನು – ತಂದೆಯವರೊಂದಿಗೆ ಸದಾ ನಿಂತಿದ್ದೇವೆ. ನಮ್ಮ ಹೆಂಡತಿ ಸ್ವೇತಾ ಹಾಗೂ ಅತ್ತಿಗೆಯವರಾದ ಡಾ. ಸಪ್ನಾ ಅವರೂ ತಂದೆಯವರ ಆರೈಕೆಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ನಮ್ಮ ಕುಟುಂಬದ ಈ ಏಕತೆ, ಪ್ರೀತಿ ಮತ್ತು ಬೆಂಬಲವೇ ನಮ್ಮ ಶಕ್ತಿ. ನಮ್ಮ ತಂದೆಯವರು ಬ್ರಾಹ್ಮಣ ಸಮಾಜ ಸೇರಿದಂತೆ ಇತರ ಸಮಾಜಗಳಲ್ಲಿಯೂ ಅಪಾರ ಗೌರವ ಹೊಂದಿದ್ದಾರೆ. ತಮ್ಮ ಬುದ್ಧಿ, ನಿಷ್ಠೆ ಮತ್ತು ಧೈರ್ಯದಿಂದ ಎಲ್ಲರನ್ನು ಒಟ್ಟುಗೂಡಿಸಿ ಮಾರ್ಗದರ್ಶನ ನೀಡುತ್ತಿರುವವರು. ತಮ್ಮ ಜೀವನವನ್ನು ಸಮಾಜಸೇವೆಗೆ ಸಮರ್ಪಿಸಿರುವ ಅವರು ನಿಜವಾಗಿಯೂ ನಮ್ಮ ಜೀವನದ ಹೀರೋ.

**ಆದ್ದರಿಂದ, ನನ್ನ ಬಾಬಾ – ನನ್ನ ಜೀವನದ ನಿಜವಾದ ಹೀರೋ.**

**–ಕಿರಣ ಜಿ. ಕಾಳೆ, ಸಾ.** ನರೇಗಲ್

## ವಿಕಸಿತ ಭಾರತ ರೋಜಗಾರ ಯೋಜನೆ ಕುರಿತು ಜನಜಾಗೃತಿ ಪಾದಯಾತ್ರೆ



■ **ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಮಾಲವಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೇಂದ್ರ ಸರ್ಕಾರದ ವಿಕಸಿತ ಭಾರತ ರೋಜಗಾರ (ವಿ.ಬಿ.ಜಿ ರಾಮ್ ಜಿ) ರಾಷ್ಟ್ರೀಯ ಯೋಜನೆ ಕುರಿತು ಜನಜಾಗೃತಿ ಮೂಡಿಸಲು ಪಾದಯಾತ್ರೆ ನಡೆಸಲಾಯಿತು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಜಾರಿಗೆ ತಂದಿರುವ ಯೋಜನೆಗಳ ಬಗ್ಗೆ ಗ್ರಾಮಸ್ಥರಿಗೆ ಮಾಹಿತಿ ನೀಡುವ ಉದ್ದೇಶದಿಂದ ಈ ಪಾದಯಾತ್ರೆ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ 2023ರ ಅಭ್ಯರ್ಥಿ ಬಲ್ಲಾಹುಣಿಸಿ ರಾಮಣ್ಣ ಅವರು ಪ್ರಸ್ತಾವಿಕವಾಗಿ ಮಾತನಾಡಿ, 2005ರಲ್ಲಿ ಯುಪಿಎ ಸರ್ಕಾರದ ಅವಧಿಯಲ್ಲಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಜಾರಿಗೆ ಬಂದಿದ್ದು, ಬಳಿಕ 2009ರಲ್ಲಿ ಅದನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಎಂದು ಮರುನಾಮಕರಣ ಮಾಡಲಾಗಿದೆ ಎಂದು ತಿಳಿಸಿದರು.

ಆ ವೇಳೆ ಪ್ರತಿಯೊಬ್ಬರಿಗೂ 170 ರೂ. ಕೂಲಿ ನೀಡಲಾಗುತ್ತಿತ್ತು. ಇದೀಗ 370 ರೂ.ಗೆ ಏರಿಕೆ ಮಾಡಲಾಗಿದೆ. ಮೊದಲು 100 ದಿನಗಳ ಉದ್ಯೋಗಾವಕಾಶ ಇದ್ದು, ಈಗ 125 ದಿನಗಳವರೆಗೆ ಹೆಚ್ಚಿಸಲಾಗಿದೆ ಎಂದು ಹೇಳಿದರು.

ಇದೇ ಯೋಜನೆಯನ್ನು ವಿಕಸಿತ ಭಾರತ ರೋಜಗಾರ ಯೋಜನೆ ಎಂದು ಮರುನಾಮಕರಣ ಮಾಡಿ ಹೊಸ ಸ್ವರೂಪ ನೀಡಿ ಕಾನೂನು ತಿದ್ದುಪಡಿ ಮಾಡಲಾಗಿದೆ ಎಂದು ವಿವರಿಸಿದರು. ಆದರೆ ರಾಜ್ಯದ ಕಾಂಗ್ರೆಸ್ ಸರ್ಕಾರ ಈ ಯೋಜನೆ ರದ್ದುಗೊಂಡಿದೆ ಎಂದು ಸುಳ್ಳು ಅಪಪ್ರಚಾರ ಮಾಡುತ್ತಿದೆ ಎಂದು ಆರೋಪಿಸಿದರು.

ಭಾರತೀಯ ಜನತಾ ಪಾರ್ಟಿಯ ಎಲ್ಲಾ ಕಾರ್ಯಕರ್ತರು ಜನರಿಗೆ ಯೋಜನೆಯ ಸತ್ಯಾಂಶ ತಿಳಿಸುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಸಂಜೀವರೆಡ್ಡಿ, ಎಸ್. ಕೃಷ್ಣನಾಯಕ್, ನರಗಲ್ ಕೊಟ್ರೇಶ್, ಕೆ.ಎಸ್. ಪ್ರಕಾಶ್, ಜೋಗಿ ಹನುಮಂತಪ್ಪ, ಕನಕಪ್ಪ ವಿ., ನರೇಗಲ್ ಮಲ್ಲಿಕಾರ್ಜುನ, ಕೊಟ್ರೇಶ್, ಹನುಮಂತಪ್ಪ ಕೊಗಲಿ, ನರಗಲ್ ಬಸವರಾಜ್, ದುರ್ಗಪ್ಪ, ಮರಿಯಪ್ಪ, ಪ್ರಕಾಶ್, ಭರ್ಮಪ್ಪ, ಮಂಜುನಾಥ್, ಭೀಮಪ್ಪ, ಕುಮಾರ್ ನೆಲ್ಲಕುದರಿ ಸೇರಿದಂತೆ ಬಿಜೆಪಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಸಹಕಾರ ಸಂಘದ ಅಧ್ಯಕ್ಷರಾಗಿ ಮಹೇಶ್ ಮುಸ್ಕಿನಭಾವಿ ಅವಿರೋಧ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ. 2ದ ನೂತನ ಅಧ್ಯಕ್ಷರಾಗಿ ಮಹೇಶ ಮುಸ್ಕಿನಭಾವಿ ಹಾಗೂ ಉಪಾಧ್ಯಕ್ಷರಾಗಿ ಪರಸಪ್ಪ ಕರಿಯಲ್ಲಪ್ಪನವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಿರ್ದೇಶಕರಾಗಿ ಅಶೋಕ ಮುಸ್ಕಿನಭಾವಿ, ಮಲ್ಲಪ್ಪ ಹಗರಿ, ನಿಂಗಪ್ಪ ಮಂಗಳೂರು, ವಿರುಪಾಕ್ಷಪ್ಪ ಕಮತರ, ಮಾಳವ್ವ ಸೋಮನಕಟ್ಟಿ, ಸಕ್ರಪ್ಪ ರಾಮತಾಳ, ಪಂಚಾಕ್ಷರಯ್ಯ ನಾಗಾವಿಮಠ, ಅನ್ನಪೂರ್ಣ ಹಡಗಲಿ, ಗಂಗವ್ವ ಮುಕ್ಕಣ್ಣವರ ಹಾಗೂ ಕಲ್ಲಪ್ಪ ಬಣವಿ ಅವರುಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಚುನಾವಣಾ ಅಧಿಕಾರಿಯಾಗಿ ಆಗಮಿಸಿದ್ದ ಸಹಕಾರ ಸಂಘಗಳ ಅಧಿಕಾರಿ ಶಾಂತಾ ಎಚ್.ಎಂ ಅವರು ಆಯ್ಕೆ ಪ್ರಕ್ರಿಯೆಯನ್ನು ಘೋಷಿಸಿದರು. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ಬಿ. ಬೆನಕಲ್ಲ ಅವರು ಸಹಾಯಕರಾಗಿ ಕಾರ್ಯನಿರ್ವಹಿಸಿದರು.

### 45 ವರ್ಷಗಳಿಂದ ಜನರಿಗೆ ಹಗಲು-ರಾತ್ರಿ ಎನ್ನದೆ ಸೇವೆ ಒದಗಿಸಿದ ಚೈತನ್ಯ

# ಜಿಲ್ಲೆ ಕಂಡ ಅಪ್ರತಿಮ ವೈದ್ಯ ಡಾ. ಜಿ.ಕೆ. ಕಾಳೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮಾಜದಲ್ಲಿ ವೈದ್ಯರನ್ನು ಪೂಜ್ಯ ಭಾವದಿಂದ ಕಾಣಲಾಗುತ್ತದೆ. ಹಲವರ ಪಾಲಿಗೆ ಅವರು ದೈವ ಸ್ವರೂಪಿ ಕೂಡ. ಮಾರಣಾಂತಿಕ ಕಾಯಿಲೆ ಗುಣಪಡಿಸಿ ಅನೇಕರಿಗೆ ಮರು ಜನ್ಮ ನೀಡುವವರೂ ಇವರೇ. ಹೀಗಾಗಿಯೇ ಭಾರತೀಯ ಸಂಸ್ಕೃತಿಯಲ್ಲಿ 'ವೈದ್ಯೋ ನಾರಾಯಣ ಹರಿಃ' ಎಂಬ ಉಲ್ಲೇಖವಿದೆ. ಹೀಗೆ ಮಾನವೀಯ ಮೌಲ್ಯಗಳನ್ನು ನಿಜ ಜೀವನದಲ್ಲಿ ಅಳವಡಿಸಿಕೊಂಡು ವೈದ್ಯ ವೃತ್ತಿಯ ಘನತೆಯನ್ನು ಹೆಚ್ಚಿಸಿದ ನರೇಗಲ್ ಪಟ್ಟಣದ ಹಿರಿಯ ವೈದ್ಯ ಡಾ. ಗಜಾನನ ಕೃಷ್ಣರಾವ್ ಕಾಳೆ ಅವರು ಗದಗ ಜಿಲ್ಲೆ ಕಂಡ ಅಪ್ರತಿಮ ವೈದ್ಯರಾಗಿದ್ದಾರೆ.

ರೋಗಿಗಳೊಂದಿಗೆ ಮಾನವೀಯ ಸಂಬಂಧ ಬೆಳೆಸಿಕೊಂಡು, ಕಷ್ಟವೆಂದು ಆಸ್ಪತ್ರೆಗೆ ಬಂದಾಗ ಆಪ್ತ ಸಮಾಲೋಚನೆ ಮೂಲಕ ಧೈರ್ಯ ತುಂಬಿ, ರೋಗಿಗಳ ಪರಿಸ್ಥಿತಿಯನ್ನು ಅರಿತು ಪರಿಣಾಮಕಾರಿ ಚಿಕಿತ್ಸೆ ನೀಡುತ್ತಾ ಬಂದಿರುತ್ತಾರೆ. ತಮ್ಮ ನಿಸ್ವಾರ್ಥ ಸೇವೆ, ಪ್ರಾಮಾಣಿಕತೆ ಮತ್ತು ವೃತ್ತಿಪರತೆಯಿಂದಾಗಿ ಸಮಾಜದಲ್ಲಿ ಗೌರವಕ್ಕೆ ಪಾತ್ರರಾಗಿದ್ದಾರೆ. ಜನ ಸೇವೆ ಮಾಡುವ ವೈದ್ಯರು ಅಂದರೆ ಕೇವಲ ಚಿಕಿತ್ಸೆ ನೀಡುವುದಲ್ಲದೆ, ತಾಳ್ಮೆ, ಪ್ರೀತಿ ಮತ್ತು ವೃತ್ತಿ ಬದ್ಧತೆಯಿಂದ ರೋಗಿಗಳನ್ನು ಆರೈಕೆ ಮಾಡುವವರಾಗಿದ್ದಾರೆ.

ವೈದ್ಯಕೀಯ ಸವಲತ್ತುಗಳು ಸಿಗದ ಗ್ರಾಮೀಣ ಭಾಗದಲ್ಲಿದ್ದುಕೊಂಡು ನಾಲ್ಕುವರೆ ದಶಕಗಳಿಂದ ಜನರಿಗೆ ಹಗಲು-ರಾತ್ರಿ ಎನ್ನದೆ ಸೇವೆ ಒದಗಿಸಿದ ಚೈತನ್ಯರಾಗಿದ್ದಾರೆ ಹಾಗೂ ಕಲ್ಯಾಣ ಕರ್ನಾಟಕದ ಗಡಿ ಭಾಗದ ಹಳ್ಳಿಗಳ ಮತ್ತು ಗದಗ ಜಿಲ್ಲೆಯ ಗ್ರಾಮೀಣರ ನೆಚ್ಚಿನ ವೈದ್ಯರಾಗಿದ್ದಾರೆ.

ಡಾ. ಜಿ.ಕೆ. ಕಾಳೆಯವರು 1950ರ ಫೆಬ್ರುವರಿ 22ರಂದು ನರೇಗಲ್‌ನಲ್ಲಿ ಜನಿಸಿದರು. ಜನ್ಮದಾತರಿಂದ ಹಾಗೂ ವಿದ್ಯೆ ಕಲಿಸಿದ ಗುರುಗಳಿಂದ ಪ್ರೇರಣೆ ಪಡೆದು ವೈದ್ಯನಾಗುವ ದೃಢಸಂಕಲ್ಪವನ್ನು ಮಾಡಿದರು. ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣವನ್ನು ನರೇಗಲ್‌ನಲ್ಲಿ, ಪಿಯು ಶಿಕ್ಷಣವನ್ನು ಗದಗ ನಗರದ ಜೆ.ಟಿ ಕಾಲೇಜಿನಲ್ಲಿ, ಬಿಎಸ್‌ಸಿ ಪದವಿಯನ್ನು ಬೆಳಗಾವಿಯ ಆರ್‌ಎಲ್‌ಎಸ್ ಕಾಲೇಜಿನಲ್ಲಿ ಹಾಗೂ ಗುಲ್ಬರ್ಗಾದ ಮಹಾದೇವಪ್ಪ ರಾಂಪುರ ಮೆಡಿಕಲ್ ಕಾಲೇಜಿನಿಂದ ಎಂಬಿಬಿಎಸ್ ವೈದ್ಯಕೀಯ ಪದವಿಯನ್ನು ಪಡೆದರು.



ಆಗಿನ ಕಾಲದಲ್ಲಿ ಹೆಚ್ಚಿನ ಚಿಕಿತ್ಸೆಗೆ ಗದಗ-ಹುಬ್ಬಳ್ಳಿಗೆ ಹೋಗುತ್ತಿದ್ದ ಜನರು ನರೇಗಲ್‌ನಲ್ಲಿಯೇ ಉತ್ತಮ ಚಿಕಿತ್ಸೆ ಪಡೆಯಲು ಮುಂದಾದರು. 2011ರ ಡಿಸೆಂಬರ್‌ನಲ್ಲಿ ಸುಸಜ್ಜಿತ ಆಸ್ಪತ್ರೆ ಆರಂಭಗೊಂಡು ಈ ಭಾಗದ ಜನರಿಗೆ ಆಧುನಿಕ ಸೌಲಭ್ಯಗಳೊಂದಿಗೆ ಸೇವೆ ಸಲ್ಲಿಸುತ್ತಿದೆ.

1985ರಲ್ಲಿ ಕಳಕೊಣ್ಣನ್ನವರ ಅವರ ನಿಧನದಿಂದ ತೆರವಾದ ಉಪಚುನಾವಣೆಗೆ ಆಕಸ್ಮಿಕವಾಗಿ ಭಾಗವಹಿಸಿ ಗೆದ್ದು ರಾಜಕೀಯ ಪ್ರವೇಶ ಮಾಡಿದರು. ಸರಳ ಸಜ್ಜನಿಕೆಯ ಶಾಸಕರಾಗಿದ್ದ ದಿವಂಗತ ಜ್ಞಾನದೇವ ದೊಡ್ಡಮೇಟಿಯವರೊಂದಿಗೆ ನಿಕಟ ಸಂಪರ್ಕದಲ್ಲಿ ಕಾರ್ಯಪ್ರವೃತ್ತರಾಗಿ 'ಅದ್ವಾನ್' ಹಿಡಿದ ಪುರಸಭೆಯಲ್ಲಿ ಕೆಲ ಬದಲಾವಣೆ ತಂದು ಸರ್ಕಾರದ ಸಹಾಯದಿಂದ ಅಭಿವೃದ್ಧಿ ಕಾರ್ಯಗಳನ್ನು ಮಾಡಿದರು.

ಈಚೆಗೆ ಹಣಬಲ, ಜಾತಿಬಲ ಚುನಾವಣೆಯಲ್ಲಿ ಸೇರಿದ ಕಾರಣದಿಂದಾಗಿ ಸಕ್ರಿಯ ರಾಜಕಾರಣದಿಂದ ದೂರ ಉಳಿದಿದ್ದಾರೆ. ಆದರೆ ಎಲ್ಲರೊಂದಿಗೆ ಪ್ರೀತಿ, ಗೌರವ, ಸ್ನೇಹತ್ವ ಉಳಿಸಿಕೊಂಡಿದ್ದಾರೆ. ಶ್ರೀ ಕಲ್ಮೇಶ್ವರ ದೇವಸ್ಥಾನ, ಶ್ರೀ ದತ್ತಾತ್ರೆಯ ದೇವಸ್ಥಾನದ ಅಭಿವೃದ್ಧಿಯಲ್ಲಿ ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಂಡು ಸೇವೆ ಸಲ್ಲಿಸಿದ್ದಾರೆ. ಡಾ. ಜಿ.ಕೆ. ಕಾಳೆಯವರ 75ನೇ ಜನ್ಮ ದಿನದ ಅಮೃತ ಮಹೋತ್ಸವದ ಸವಿನೆನಪಿಗಾಗಿ, ಅವರ ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಮತ್ತು ಕೃಷಿಕ ಸಾಧನೆಗಳು ಮುಂದಿನ ಪೀಳಿಗೆಗೆ ಪರಿಚಯವಾಗಲಿ ಎನ್ನುವ ಉದ್ದೇಶದೊಂದಿಗೆ ಕುಟುಂಬಸ್ಥರು, ಅಭಿಮಾನಿಗಳು ಹಾಗೂ ಹಿತೈಷಿಗಳು ಲೇಖನಗಳ ಸರಮಾಲೆ 'ಸಮರ್ಪಿತ' ಎನ್ನುವ ಅಭಿನಂದನಾ ಗ್ರಂಥವನ್ನು ಸಮರ್ಪಣೆ ಮಾಡುತ್ತಿದ್ದಾರೆ. ಫೆ. 22ರಂದು ಕೋಡಿಕೊಪ್ಪದ ವೀರಪ್ಪಜ್ಜನ ಮಠದಲ್ಲಿ ಕಾರ್ಯಕ್ರಮ ನಡೆಯಲಿದೆ.

> ಮೂಲ ಸೌಲಭ್ಯಗಳ ಲಭ್ಯತೆ ಇಲ್ಲದ ಕಾಲದಿಂದ ಇಂದಿನವರೆಗೂ ಗ್ರಾಮೀಣ ಭಾಗದ ಜನರಿಗೆ ವೈದ್ಯಕೀಯ ಸೇವೆ ಸಲ್ಲಿಸಿರುವುದು ಸಂತೋಷ ನೀಡಿದೆ. ಜನರು ತೋರಿಸುವ ಪ್ರೀತಿ ಗೌರವಕ್ಕೆ ಚಿರಋಣಿಯಾಗಿರುವೆ. ಜೀವನದ ಕೊನೆವರೆಗೂ ವೈದ್ಯಕೀಯ ಸೇವೆಯನ್ನು ಸಮರ್ಪಿಸುವೆ. ನಾನೊಬ್ಬ ನೇರ ನುಡಿಗಳ ಮನುಷ್ಯ. ಯಾರಿಗಾದರೂ ನೋಯಿಸಿದ್ದರೆ ಮನ್ನಿಸಿ.
>
> **– ಡಾ. ಜಿ.ಕೆ. ಕಾಳೆ.**
> ಹಿರಿಯ ವೈದ್ಯರು.

### ಶಿಗ್ಲಿಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗಾಗಿ ಪುನಶ್ಚೇತನ ಕಾರ್ಯಾಗಾರ

# ಸಾಧನೆಯ ಗುರಿಯೊಂದಿಗೆ ಅಭ್ಯಾಸದಲ್ಲಿ ತೊಡಗಿ



> ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ನಾಣಕಿನಾಯಕ್ ಮಾತನಾಡಿ, ವಾರ್ಷಿಕ ಪರೀಕ್ಷೆ ಮುಗಿಯುವವರೆಗೂ ಮೊಬೈಲ್, ಟಿ.ವಿಗಳಿಂದ ದೂರವಿದ್ದು ಹೆಚ್ಚು ಸಮಯವನ್ನು ಅಭ್ಯಾಸದಲ್ಲಿ ತೊಡಗಿಸಿಕೊಳ್ಳಬೇಕು.
>
> ಈ ಬಾರಿ ಜಿಲ್ಲೆಗೆ ಮತ್ತು ರಾಜ್ಯಕ್ಕೆ ನಮ್ಮ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕಿನ ಮಕ್ಕಳು ಪ್ರಥಮ ಸ್ಥಾನ ಪಡೆಯುವುದರ ಮೂಲಕ ತಾಲೂಕಿನ ಕೀರ್ತಿ ಹೆಚ್ಚಿಸಬೇಕು ಎಂದರು.

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿಗಳ ಸಾಧನೆಯಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದ್ದು, ವಿದ್ಯಾರ್ಥಿಗಳಿಗೆ ಹೆಚ್ಚಿನ ಒತ್ತಡ ಹೇರದೆ ಸೂಕ್ತ ಮಾರ್ಗದರ್ಶನ ಮತ್ತು ಸಮರ್ಪಕ ಬೋಧನಾ ವಿಧಾನಗಳಿಂದ ಉತ್ತಮ ಫಲಿತಾಂಶ ಸಾಧಿಸಲು ಸಾಧ್ಯವಾಗುತ್ತದೆ ಎಂದು ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಹೇಳಿದರು.

ಅವರು ಶಿಗ್ಲಿಯ ಕೆ.ಜಿ. ಮುದಗಲ್ಲ ಪ್ರೌಢಶಾಲೆ ಶಿಗ್ಲಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಿರಹಟ್ಟಿ ಇವುಗಳ ಸಂಯುಕ್ತಾಶ್ರಯದಲ್ಲಿ 2025-26ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಗ್ರಾಮೀಣ ಮಟ್ಟದ ನಿಧಾನ ಗತಿಯ ಕಲಿಕಾ ಮಕ್ಕಳ ಪುನಶ್ಚೇತನ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಎಸ್‌ಎಸ್‌ಎಲ್‌ಸಿ ಮಹತ್ವದ ಘಟ್ಟವಾಗಿದ್ದು, ವಿದ್ಯಾರ್ಥಿಗಳು ಶಿಕ್ಷಕರು ಹೇಳಿದ ಪಾಠಗಳನ್ನು ಸರಿಯಾಗಿ ಮನನ ಮಾಡಿಕೊಂಡು ನಿತ್ಯ ಅಭ್ಯಾಸದಲ್ಲಿ ತೊಡಗಿಸಿಕೊಂಡಲ್ಲಿ ಉತ್ತಮ ಫಲಿತಾಂಶ ನಿಮ್ಮದಾಗುತ್ತದೆ. ಈ ನಿಟ್ಟಿನಲ್ಲಿ ಇಂದಿನಿಂದಲೇ ಸಾಧನೆಯ ಗುರಿಯೊಂದಿಗೆ ಅಭ್ಯಾಸದಲ್ಲಿ ತೊಡಗಿಸಿಕೊಂಡು ಯಶಸ್ವಿಯಾಗಿ ಎಂದು ಸಲಹೆ ನೀಡಿದರು.

ಜಿ.ಎಸ್.ಎಸ್ ಸಂಸ್ಥೆಯ ಚೇರಮನ್ ರಂಜನ್ ಪಾಟೀಲ್ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ವೈಸ್ ಚೇರಮನ್ ರಾಜರತ್ನ ಹುರಗೂರ, ಶಿಗ್ಲಿ ಸಿ.ಆರ್.ಪಿ ಜ್ಯೋತಿ ಗಾಯಕವಾಡ, ಸಂಪನ್ಮೂಲ ಶಿಕ್ಷಕರಾದ ವ್ಹಿ.ಜಿ. ಜೊಗೋಜಿ, ದೀಪಕ್ ಕರಾತೆ, ಬಿ.ಬಿ. ಚಿಟಗಿ, ಮುಖ್ಯೋಪಾಧ್ಯಾಯರಾದ ಎಲ್. ಎಸ್. ಅರಳಹಳ್ಳಿ, ಸಿ.ಬಿ. ಮೊಗಲಿ, ಶಿಕ್ಷಕರಾದ ಎಂ.ಬಿ. ಕಲ್ಲೂರ, ವ್ಹಿ.ಸಿ. ಬೆಂಡಿಗೇರಿ, ಟಿ.ಎಸ್. ಹೂಗಾರ, ವಿದ್ಯಾ ತೆಳಗಿನಮನಿ, ವಿನೋದಾ ಗೋಣಿ, ವ್ಹಿ.ಎ. ಪಾಟೀಲ, ಜ್ಯೋತಿ ಕರಜಗಿ, ಎಂ.ಎಂ. ಹೆಬ್ಬಳ್ಳಿ, ಮಂಜುಳಾ ಗುಡಿಮನಿ, ಲಕ್ಷ್ಮೀ ರಿತ್ತಿ, ಬಿ.ಬಿ. ಬಳಿಗಾರ, ಆರ್. ಎಂ. ಜಂಬೇರಾಳ ಮುಂತಾದವರು ಹಾಜರಿದ್ದರು.

ಕಾರ್ಯಾಗಾರದಲ್ಲಿ ಸರ್ಕಾರಿ ಪ್ರೌಢಶಾಲೆ ಯಲ್ಲಾಪುರ, ಶಿಗ್ಲಿಯ ಕೆ.ಜಿ. ಮುದಗಲ್ಲ ಪ್ರೌಢಶಾಲೆ, ಎಸ್. ಎಸ್. ಕೂಡ್ಲಮಠ ಪ್ರೌಢಶಾಲೆಯ ಆಂಗ್ಲ ಹಾಗೂ ಕನ್ನಡ ಮಾಧ್ಯಮ ಪ್ರೌಢಶಾಲೆ ಮತ್ತು ನವಚೇತನ ಪ್ರೌಢಶಾಲೆಗಳ ಸುಮಾರು 150 ಮಕ್ಕಳು ಭಾಗವಹಿಸಿ ಪ್ರಯೋಜನ ಪಡೆದುಕೊಂಡರು.

# ದೇವತಾ ಕಾರ್ಯಕ್ರಮಕ್ಕೆ ದೇಣಿಗೆ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸಮೀಪದ ಕೊಡಗಾನೂರು ಗ್ರಾಮದಲ್ಲಿನ ಶ್ರೀ ಮಾರುತಿ ದೇವಸ್ಥಾನದ ನೂತನ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮದ ಅಂಗವಾಗಿ 1,40,000 ರೂ ದೇಣಿಗೆಯನ್ನು ನಿವೃತ್ತ ಶಿಕ್ಷಕರಾದ ನೂರಂದಪ್ಪ ಮಾಹಾಂತಪ್ಪ ಕಲ್ಯಾಣಿ ಹಾಗೂ ಅವರ ಧರ್ಮಪತ್ನಿ ಪಾರ್ವತಮ್ಮ ನೂರಂದಪ್ಪ ಕಲ್ಯಾಣಿ ಅವರು ನೀಡಿದರು.

ದೇವಸ್ಥಾನದ ಅಭಿವೃದ್ಧಿ ಹಾಗೂ ಧಾರ್ಮಿಕ ಕಾರ್ಯಗಳಿಗೆ ಸದಾ ಸಹಕಾರ ನೀಡುತ್ತಿರುವ ಕಲ್ಯಾಣಿ ದಂಪತಿ, ಈ ಬಾರಿ ಮೂರ್ತಿ ಪ್ರತಿಷ್ಠಾಪನೆ ಕಾರ್ಯ ಯಶಸ್ವಿಯಾಗಿ ನೆರವೇರಲೆಂಬ ಉದ್ದೇಶದಿಂದ ದೇಣಿಗೆ ಮೊತ್ತದ ಚೆಕ್‌ನ್ನು ದೇವಸ್ಥಾನ ಸಮಿತಿಗೆ ಅಧಿಕೃತವಾಗಿ ಹಸ್ತಾಂತರಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮದ ಗುರು ಹಿರಿಯರು, ದೇವಸ್ಥಾನ ಸಮಿತಿ ಸದಸ್ಯರು ಹಾಗೂ ಯುವಕ ಮಿತ್ರರು ಭಾಗವಹಿಸಿ ದಂಪತಿಯನ್ನು ಗೌರವಪೂರ್ವಕವಾಗಿ ಸನ್ಮಾನಿಸಿದರು. ಈ ವೇಳೆ ಮಾತನಾಡಿದ ಗ್ರಾಮ ಹಿರಿಯರು, ಶಿಕ್ಷಕರಾಗಿ ಹಲವು ವರ್ಷಗಳ ಕಾಲ ಸಮಾಜ ಸೇವೆ ಸಲ್ಲಿಸಿದ ನೂರಂದಪ್ಪ ಕಲ್ಯಾಣಿ ಅವರು ನಿವೃತ್ತಿಯಾದ ನಂತರವೂ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ರಾಮದ ಏಕತೆ, ಭಕ್ತಿಭಾವ ಮತ್ತು ಸಹಕಾರದ ಪ್ರತೀಕವಾಗಿ ಈ ದೇಣಿಗೆ ಕಾರ್ಯ ಗಮನ ಸೆಳೆದಿದ್ದು, ನೂತನ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮ ಭಕ್ತಿಭಾವದಿಂದ ಹಾಗೂ ವಿಜೃಂಭಣೆಯಿಂದ ನೆರವೇರಲಿದೆ ಎಂದು ದೇವಸ್ಥಾನ ಸಮಿತಿ ತಿಳಿಸಿದೆ.

ಈ ಸಂದರ್ಭದಲ್ಲಿ ಚಂದ್ರಶೇಖರಯ್ಯ ಹಿರೇಮಠ, ಆರ್. ಎನ್. ಜೋಶಿ, ಬಸಯ್ಯ ಕಪ್ಲಿಮಠ, ಪ್ರಶಾಂತ ವಾಲ್ಮೀಕಿ, ನಾಗಯ್ಯ ಹಿರೇಮಠ, ಹನುಮಂತ ರಾಮಜಿ, ರಾಚಯ್ಯ ಬಾಳಿಕಾಯಿಮಠ, ಅಂದಪ್ಪ ವಾಲ್ಮೀಕಿ, ಶರಣಪ್ಪ ಹೂಗಾರ, ರಾಮಪ್ಪ ಹೂಗಾರ, ಸಂಗಪ್ಪ ಹೂಗಾರ ಸೇರಿದಂತೆ ಊರಿನ ಹಿರಿಯರು, ಯುವಕರು ಉಪಸ್ಥಿತರಿದ್ದರು.

# ಶಾಲಾ ನಾಮಫಲಕ, ಪುಸ್ತಕ ಕೊಡುಗೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಶಿಗ್ಲಿ ಗ್ರಾಮದ ಉನ್ನತೀಕರಿಸಿದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಗೆ ಬೆಂಗಳೂರಿನ AT &T company ಇವರು ಶಾಲಾ ನಾಮಫಲಕ, ಗ್ರಂಥಾಲಯ ಪುಸ್ತಕ ಹಾಗೂ ನಲಿ-ಕಲಿ ಮಕ್ಕಳಿಗೆ ಚೇರ್, ಟೇಬಲ್ ಕೊಡುಗೆಯಾಗಿ ನೀಡಿದರು.

ಬುಧವಾರ ನಡೆದ ವಿತರಣಾ ಸಮಾರಂಭದಲ್ಲಿ ಕಂಪನಿಯ ಪ್ರತಿನಿಧಿ ರಮೇಶ್ ಆನಂದ ಅವರು ಮಾತನಾಡಿ, ಗ್ರಾಮೀಣ ಭಾಗದ ಸರಕಾರಿ ಶಾಲೆಯಲ್ಲಿ ಪ್ರತಿಭಾವಂತ ಮಕ್ಕಳು ಹೊರಬರುತ್ತಾರೆ ಎನ್ನುವದಕ್ಕೆ ಶಿಗ್ಲಿ ಶಾಲೆ ಒಂದು ಉದಾಹರಣೆಯಾಗಿದೆ ಎಂದು ಹೇಳಿದರು.

ಯೂಥ್ ಪಾರ್ ಸೇವಾ ಸಂಸ್ಥೆಯ ಸಂತೋಷ ಮತ್ತು ರವಿಶಂಕರ ಮಾತನಾಡಿ, ಇಂತಹ ದೂರದ ಊರಿನ ಕಂಪನಿಗಳನ್ನು ಸಂಪರ್ಕಿಸಿ ವಿದ್ಯಾರ್ಥಿಗಳ ಕಲಿಕೆ ಸಹಾಯಕವಾಗುವ ಉಪಕರಣಗಳನ್ನು ಒದಗಿಸಿದ ಎಲ್ಲರಿಗೂ ಅಭಿನಂದನೆಗಳನ್ನು ತಿಳಿಸಿ, ಮಕ್ಕಳು ಸೌಲಭ್ಯದ ಸದುಪಯೋಗ ಪಡೆದುಕೊಳ್ಳುವಂತೆ ಕರೆ ನೀಡಿದರು.

ಸ್ವಗ್ರಾಮ ಪ್ರತಿನಿಧಿ ಗಿರೀಶ್ ವಿರಕ್ತಮಠ, ಸಂತೋಷ ತಡಹಳ, ಮುಖ್ಯೋಪಾಧ್ಯಾಯೆ ಎನ್.ವಿ. ಕುಲಕರ್ಣಿ ಇದ್ದರು. ಎಸ್‌ಡಿಎಂಸಿ ಅಧ್ಯಕ್ಷ ರಮೇಶ ಬೂದಿಹಾಳ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಆರ್.ಡಿ. ಕಲಾಯಗರ ಪಾಲ್ಗೊಂಡಿದ್ದರು. ಎಸ್.ಬಿ. ಅಣ್ಣಿಗೇರಿ ಸ್ವಾಗತಿಸಿದರು. ಟಿಪ್ಪನಾಯಕ ಎಲ್ ಪ್ರಾಸ್ತಾವಿಕವಾಗಿ ಮಾತನಾಡಿದರು, ದೀಪಾ ಭೇಸ್ಮೆ ನಿರೂಪಿಸಿದರು.




## ದೇವರ ಮೂರ್ತಿ ಭಗ್ನಗೊಳಿಸಿದ ದುಷ್ಕರ್ಮಿಗಳು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಆದರಹಳ್ಳಿ-ದೇವಿಹಾಳ ಮಾರ್ಗಕ್ಕೆ ಹೊಂದಿಕೊಂಡಿರುವ ದಂಡೇರಿ ಮರಿಯಮ್ಮ ದೇವಸ್ಥಾನದ ಮರಿಯಮ್ಮ ದೇವಿಯ ಮೂರ್ತಿಯನ್ನು ದುಷ್ಕರ್ಮಿಗಳು ಭಗ್ನಗೊಳಿಸಿದ ಘಟನೆ ಬುಧವಾರ ರಾತ್ರಿ ನಡೆದಿದೆ.

ಈ ಕುರಿತು ಮಾಹಿತಿ ನೀಡಿದ ದೇವಸ್ಥಾನದ ಅರ್ಚಕ ದ್ಯಾಮಣ್ಣ ಲಮಾಣಿ, ಬುಧವಾರ ರಾತ್ರಿ 10 ಗಂಟೆವರೆಗೂ ದೇವಸ್ಥಾನದಲ್ಲಿಯೇ ಇದ್ದು ರಾತ್ರಿ ದೇವಸ್ಥಾನ ಬಾಗಿಲಿಗೆ ಬೀಗ ಹಾಕಿ ಬಂದಿದ್ದೆ.

ಗುರುವಾರ ಬೆಳಿಗ್ಗೆ ಪೂಜೆಗಾಗಿ ದೇವಸ್ಥಾನದ ಬಾಗಿಲು ತೆರೆಯಲು ಹೋದಾಗ ಕೀಲಿಕೈ ಮುರಿದು ಬಾಗಿಲು ತೆರೆಯಲಾಗಿತ್ತು. ದೇವಿಯ ಮೂರ್ತಿಯ ಹಣೆ, ಕಣ್ಣು, ಮೂಗು, ಬಾಯಿ ಸೇರಿ ಮುಖದ ಭಾಗವನ್ನು ಒಡೆದು ಹಾಕಿದ್ದರು. ಕೂಡಲೇ ಗ್ರಾಮಸ್ಥರಿಗೆ ವಿಷಯ ಮುಟ್ಟಿಸಿದ್ದರಿಂದ ದೌಡಾಯಿಸಿ ಬಂದ ಭಕ್ತರು ಆಕ್ರೋಶ ವ್ಯಕ್ತಪಡಿಸಿದರು ಎಂದು ತಿಳಿಸಿದ್ದಾರೆ.

ದೇವಿಮೂರ್ತಿ ವಿರೂಪಗೊಳಿಸಿದ ವಿಷಯ ತಿಳಿದ ಆದ್ರಳ್ಳಿ ಮತ್ತು ಸುತ್ತಲಿನ ಗ್ರಾಮಗಳ ಭಕ್ತರು ಆಕ್ರೋಶ ವ್ಯಪಡಿಸಿದ್ದಾರೆ ಮತ್ತು ವಿಕೃತ ಮನಸ್ಸಿನ ದುಷ್ಕರ್ಮಿಗಳ ಪತ್ತೆಗೆ ಆಗ್ರಹಿಸಿ ಲಕ್ಷ್ಮೇಶ್ವರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ನಾಗರಾಜ ಗಡಾದ, ಅಪರಾಧ ವಿಭಾಗದ ಪಿಎಸ್‌ಐ ಟಿ.ಕೆ. ರಾಠೋಡ, ಶ್ವಾನದಳ ಹಾಗೂ ಬೆರಳಚ್ಚು ತಜ್ಞರು, ಪೊಲೀಸ್ ಸಿಬ್ಬಂದಿಗಳು ಭೇಟಿ ನೀಡಿ, ಪರಿಶೀಲಿಸಿ ಮಾಹಿತಿ ಪಡೆದಿದ್ದಾರೆ.

ನೂರಾರು ವರ್ಷಗಳಷ್ಟು ಹಳೆಯದಾಗ ದೇವಸ್ಥಾನವನ್ನು ಕೆಲ ವರ್ಷಗಳ ಹಿಂದೆ ಜೀರ್ಣೋದ್ಧಾರಗೊಳಿಸಿ ಹೊಸ ಮೂರ್ತಿ ಪ್ರತಿಷ್ಠಾಪಿಸಲಾಗಿತ್ತು. ಇದೇ ರಾತ್ರಿ ಮುಂಡರಗಿ ತಾಲೂಕಿನ ಮಲ್ಲಿಕಾರ್ಜುನಪುರ ಗಾಳಿ ಬಸವೇಶ್ವರ ಮತ್ತು 2-3 ದಿನಗಳ ಹಿಂದೆ ಶಿಂಘಟಾಲೂರನಲ್ಲಿ ಶಿವಲಿಂಗ, ಬಸವಣ್ಣನ ಮೂರ್ತಿ ಹೀಗೆ ಹಿಂದೂ ದೇವರ ಮೂರ್ತಿ ಭಗ್ನಗೊಳಿಸಿರುವುದು ಹಿಂದೂಗಳ ಧಾರ್ಮಿಕ ಭಾವನೆಗೆ ಧಕ್ಕೆಯಾಗಿದ್ದು, ಸಾರ್ವಜನಿಕ ವಲಯದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.

# ಶಿವಾಜಿ ಮಾಹಾರಾಜರು ಅಪ್ರತಿಮ ಹೋರಾಟಗಾರ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಭಾರತದ ಇತಿಹಾಸ ಕಂಡ ಅಪ್ರತಿಮ ಹೋರಾಟಗಾರ ಶಿವಾಜಿ ಮಾಹಾರಾಜರು ಎಂದು ಮಂಜುನಾಥ ಮಟ್ಟಿ ಹೇಳಿದರು.

ಅವರು ಪಟ್ಟಣದ ರೇಣುಕಾ ಯಲ್ಲಮ್ಮ ದೇವಸ್ಥಾನದಲ್ಲಿ ಪತಂಜಲಿ ಯೋಗ ಸಮಿತಿ ವತಿಯಿಂದ ಛತ್ರಪತಿ ಶಿವಾಜಿ ಮಾಹಾರಾಜರ 396ನೇ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಕೇವಲ 16ನೇ ವಯಸ್ಸಿನಲ್ಲೇ ಗೆರಿಲ್ಲಾ ಯುದ್ಧ ತಂತ್ರದ ಮೂಲಕ ವಿಜಯನಗರ ಸಾಮ್ರಾಜ್ಯದ ಪತನದ ನಂತರ ಹಿಂದೂ ಸ್ವರಾಜ್ಯವನ್ನು ಸ್ಥಾಪಿಸಿದ ಮಾಹಾ ವೀರ ನಾಯಕರು. ಬ್ರಿಟಿಷರ ಆಡಳಿತದಿಂದ ಮುಕ್ತಿ, ದೇಶದ ಮೇಲಿನ ದಬ್ಬಾಳಿಕೆ, ಮಹಿಳೆಯರ ಮೇಲಿನ ಅತ್ಯಾಚಾರ ತಡೆಯಲು ಹೋರಾಟದ ಮೂಲಕ ಅಜರಾಮರರಾದವರು ಶಿವಾಜಿ ಮಹಾರಾಜರು ಎಂದರು.

ಎಸ್.ಸಿ. ಬಡ್ನಿ ಮಾತನಾಡಿ, ಶಿವಾಜಿ ಮಾಹಾರಾಜರು ಅತಿ ಚಿಕ್ಕ ವಯಸ್ಸಿನಲ್ಲೆ ಹೋರಾಟದ ಮೂಲಕ ನಮಗೆಲ್ಲರಿಗೂ ಮಾದರಿ ನಾಯಕರಾದವರು.

ಇವರ ತತ್ವ ಸಿದ್ಧಾಂತಗಳನ್ನು ಇಂದಿನ ಮಕ್ಕಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು.

ಪ್ರಕಾಶ ಮದ್ದಿನ ಪ್ರತಿಯೊಬ್ಬ ನಾಯಕರ, ಸಂತರ, ಶರಣರ ಜಯಂತಿಗಳನ್ನು ಆಚರಣೆ ಮಾಡುವ ಮೂಲಕ ಮಕ್ಕಳಿಗೆ ಸಂಸ್ಕಾರಯುತ, ಮೌಲ್ಯಯುತ ಶಿಕ್ಷಣ ನೀಡುತ್ತಿರುವು ಶ್ಲಾಘನೀಯ ಕಾರ್ಯವಾಗಿದೆ ಎಂದರು.

ಅಧ್ಯಕ್ಷತೆಯನ್ನು ಎಸ್.ಸಿ. ಬಡ್ನಿ ವಹಿಸಿದ್ದರು. ಡಾ. ಎಸ್.ಸಿ. ಚವಡಿ, ಯೋಗ ಗುರು ಪ್ರಕಾಶ ಮದ್ದಿನ, ಶಿವಾನಂದ ಆಪ್ತಗೇರಿ, ಮಂಜುನಾಥ ಮಟ್ಟಿ ಇದ್ದರು.

**ಛತ್ರಪತಿ ಶಿವಾಜಿ ಮಹಾರಾಜ, ಸಂತ ಸೇವಾಲಾಲ್ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಸೋಮಲಿಂಗ ಶ್ರೀಗಳು**

# ಹಿಂದೂಗಳಿಗೆ ಸೇವಾಲಾಲರ ಆಧ್ಯಾತ್ಮಿಕತೆ, ಶಿವಾಜಿ ಶೌರ್ಯ ಅಗತ್ಯವಿದೆ



ಹಿಂದೂಗಳು ಹಿಂದೂಗಳಾಗಿಯೇ ಉಳಿಯಲು ಛತ್ರಪತಿ ಶಿವಾಜಿ ಮಹಾರಾಜರು ಪ್ರಮುಖ ಕಾರಣೀಕರ್ತರಾಗಿದ್ದಾರೆ. ಆದರೆ, ಇಂದು ಅದೇ ಹಿಂದೂಗಳಲ್ಲಿ ಜಾತಿ ಎಂಬ ವಿಷಬೀಜ ಹೊಕ್ಕಿರುವುದು ದುರಂತದ ಸಂಗತಿಯಾಗಿದೆ. ಮಹಾಪುರುಷರಿಗೆ ಯಾವುದೇ ಜಾತಿಗಳು ಇರಲಿಲ್ಲ. ಯುವಕರು ಹಿಂದೂ ಸಂಘಟನೆಗಳನ್ನು ಅಪ್ಪಿಕೊಂಡು ಸಮಾಜವನ್ನು ಒಂದುಗೂಡಿಸಬೇಕು. ಮಹಿಳೆಯರು ಹಿಂದೂ ಸಂಘಟನೆಯಲ್ಲಿ ಪಾಲ್ಗೊಳ್ಳಬೇಕಿದೆ.

**– ರಾಜು ಖಾನಪ್ಪನವರ.**
ಕ.ರಾ.ಹಿಂ ಸಂಘಟನೆಗಳ ಒಕ್ಕೂಟದ ರಾಜ್ಯ ಸಂಚಾಲಕ.

ಕಾರ್ಯಕ್ರಮ ಯಶಸ್ವಿಗೊಳಿಸಲು ಸಾಕಷ್ಟು ಪೂರ್ವತಯಾರಿ ನಡೆಸಲಾಗಿತ್ತು. ಎಲ್ಲ ಹಿಂದೂ ಬಾಂಧವರು ಸ್ವ-ಇಚ್ಛೆಯಿಂದ ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಿದ್ದಾರೆ. ನಮ್ಮತನವನ್ನು ನಾವು ಕಾಪಾಡಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು. ಬೇರೆಯವರ ನೋವಿಗೆ ನಾವು ಸ್ಪಂದಿಸಬೇಕಿದೆ. ರಾಜು ಖಾನಪ್ಪನವರ ಹಿಂದೂತ್ವಕ್ಕಾಗಿ ನಿರಂತರ ಜಾಗೃತಿ, ಹೋರಾಟ ಮಾಡುತ್ತಾ ಬಂದಿದ್ದಾರೆ. ನಾವೆಲ್ಲರೂ ಅವರಿಗೆ ಬೆನ್ನೆಲುಬಾಗಿ ನಿಲ್ಲೋಣ.

**– ಜಗದೀಶ್ ಎಸ್.ಪಿ.**
ಜಯಂತ್ಯುತ್ಸವದ ಮಾಜಿ ಅಧ್ಯಕ್ಷ.

**■ ವಿಜಯಸಾಕ್ಷಿ ಸುದ್ದಿ, ಗದಗ**

ಶಿವಾಜಿ ಮಹಾರಾಜರು ಕೇವಲ ಯುದ್ಧ ಮಾಡಿ ಹಿಂದೂ ಸಾಮ್ರಾಜ್ಯ ಕಟ್ಟಲಿಲ್ಲ. ಆಧ್ಯಾತ್ಮಿಕತೆಯ ಮೂಲಕವೂ ಕಟ್ಟಿದ್ದಾರೆ. ಸಂತ ಸೇವಾಲಾಲರ ಆಧ್ಯಾತ್ಮಿಕತೆ, ಶಿವಾಜಿ ಮಹಾರಾಜರ ಶೌರ್ಯದಿಂದ ಹಿಂದೂಗಳು ಹಿಂದೂಗಳಾಗಿ ಉಳಿಯಲು ಸಾಧ್ಯವಾಗಿದೆ. ಕೆಲವು ಮಠಾಧಿಶರು ಹಿಂದೂ ದೇವರುಗಳಿಗೆ ಅವಮಾನ ಮಾಡುತ್ತಿದ್ದಾರೆ. ಅವರಿಗೆ ಸೇವಾಲಾಲರ ಆಧ್ಯಾತ್ಮಿಕತೆ ಉಪಯೋಗಕ್ಕೆ ಬರುವುದಿಲ್ಲ. ಶಿವಾಜಿ ಮಹಾರಾಜರಂತಹ ಪರಕ್ರಮ ಬೇಕಾಗಿದೆ ಎಂದು ವಿಜಯಪುರ ಜಿಲ್ಲೆಯ ಶಂಕರಲಿಂಗ ಗುರುಪಿಠದ ಶ್ರೀ ಸೋಮಲಿಂಗ ಶ್ರೀಗಳು ನುಡಿದರು.

ನಗರದ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಕರ್ನಾಟಕ ರಾಜ್ಯ ಹಿಂದೂ ಸಂಘಟನೆಗಳ ಒಕ್ಕೂಟ, ಶಿವ ರಾಮಕೃಷ್ಣ ಸೇವಾ ಟ್ರಸ್ಟ್ ಗದಗ, ದಲಿತ ಮಿತ್ರ ಮೇಳ ಹಾಗೂ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಸಮಿತಿ–2026 ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ 399ನೇ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಹಾಗೂ ಸಂತ ಶ್ರೀ ಸೇವಾಲಾಲ್ ಮಹಾರಾಜರ ಜಯಂತ್ಯುತ್ಸವ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಪಠ್ಯ–ಪುಸ್ತಕದಲ್ಲಿ ಕೇವಲ ಅಪ್ಜಲಖಾನ್, ಬಾಬರ್, ಅಕ್ಬರ್ ಚರಿತ್ರೆ ತೋರಿಸಲಾಗಿದೆ. ಆದರೆ, ಛತ್ರಪತಿ ಶಿವಾಜಿ ಮಹಾರಾಜರ ಇತಿಹಾಸ ತೋರಿಸಲಿಲ್ಲ. ಮುಸಲ್ಮಾನ ದೊರೆಗಳು 6 ಸಾವಿರಕ್ಕೂ ಹೆಚ್ಚು ಮಂದಿರಗಳನ್ನು ಕೆಡವಿ ಮಸೀದಿಗಳಾಗಿ ಪರಿವರ್ತನೆ ಮಾಡಿದರು. ಇಂತಹ ಇತಿಹಾಸದ ಘಟನೆಗಳಿಂದ ಹಿಂದೂಗಳು ಎಚ್ಚೆತ್ತುಕೊಳ್ಳಬೇಕು. ಸನಾತನ ಸಂಸ್ಕೃತಿಗೆ ತನ್ನದೇ ಆದ ಇತಿಹಾಸವಿದೆ. ಮಕ್ಕಳಿಗೆ ಶಿವಾಜಿ ಮಹಾರಾಜ, ಸಂಗೊಳ್ಳಿ ರಾಯಣ್ಣ, ರಾಣಿ ಚನ್ನಮ್ಮ, ಬಸವಣ್ಣನವರ ಇತಿಹಾಸ ತಿಳಿಸಬೇಕಿದೆ ಎಂದರು.

ಈ ವೇಳೆ ಶಿವಪ್ಪ ನಾಯಕ್, ವಿಜಯಕುಮಾರ ಗಡ್ಡಿ, ಲಕ್ಷ್ಮಣ್ ಸಂತರು, ಮಹೇಶ್ ರೋಖಡೆ, ಸೋಮು ಗುಡಿ, ಸಹದೇವ ಗಣಾಚಾರಿ, ಕೆ.ಸಿ. ಮಲ್ಲಾಪೂರ, 2025ರ ಸಮಿತಿಯ ವಿರೂಪಾಕ್ಷಪ್ಪ ಹೆಬ್ಬಳ್ಳಿ, ಸುರೇಶ್ ಲಮಾಣಿ, ರಾಜಣ್ಣ ಮಲ್ಲಾಡದ, ರವಿಕಾಂತ್ ಅಂಗಡಿ, ವೆಂಕಟೇಶ್ ರಾಥೋಡ್, ಮೋಹನ್ ಗ್ವಾರಿ, ಶರತರಾವ್ ಹುಯಿಲಗೋಳ, ಅಜ್ಜಣ್ಣ ಮಲ್ಲಾಡದ, ರಾಜು ಮುಧೋಳ, ಅವಿನಾಶ್ ಜೈನ್, ಮಂಜು ಗಜಾಕೋಶ, ಫಕ್ಕಿರಸಾಬ್ ಬಾಂಡಗೆ, ಕುಮಾರ ನಡಗೇರಿ, ಐ.ಎಸ್. ಪೂಜಾರ, ರವಿ ಕರಬಸಣ್ಣನವರ, ಅನಿಲ ಅಬ್ಬಿಗೇರಿ, ಬಸವರಾಜ ಹುಬ್ಬಳ್ಳಿ, ಸಂತೋಷ್ ಪವಾರ, ದೇವು ಲಮಾಣಿ, ವಿಠ್ಠಲ ತೋಟದ, ವಿಠ್ಠಲ ಬಾಂಡಗೆ ಮುಂತಾದವರು ಉಪಸ್ಥಿತರಿದ್ದರು.

## ಅಹಿಂದ ಸಂಘಟನೆಗೆ ಆಯ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಅಲ್ಪಸಂಖ್ಯಾತರ ಹಿಂದುಳಿದ ವರ್ಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ರಾಜ್ಯ ಘಟಕ ರಾಜ್ಯ ಸಮಿತಿಯು ಇವ್ಹಾವ್ಹಸಾಬ ಬಿ.ಕಲೇಗಾರ ಅವರನ್ನು ರಾಷ್ಟ್ರೀಯ ಅಹಿಂದ ಸಂಘಟನೆ ಗದಗ ಜಿಲ್ಲಾ ಅಧ್ಯಕ್ಷರನ್ನಾಗಿ ಆಯ್ಕೆ



ಮಾಡಿದೆ ಎಂದು ರಾಷ್ಟ್ರೀಯ ಅಹಿಂದ ಸಂಘಟನೆಯ ರಾಜ್ಯಾಧ್ಯಕ್ಷ ಮುತ್ತಣ್ಣ ಎಸ್.ಶಿವಳ್ಳಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಾಶಿವರಾತ್ರಿ ಅಂಗವಾಗಿ ಸಾಂಸ್ಕೃತಿಕ ಕಾರ್ಯಕ್ರಮ



**■ ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಗದಗ ಇವರ ವತಿಯಿಂದ ಮಹಾಶಿವರಾತ್ರಿಯ ಅಂಗವಾಗಿ ನಗರದ ಮುನ್ಸಿಪಲ್ ಹೈಸ್ಕೂಲ್ ಮೈದಾನದಲ್ಲಿ ಆಯೋಜಿಸಲಾಗಿದ್ದ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್ ಸಂಸ್ಥೆಯ ಮಕ್ಕಳು ಯಶಸ್ವಿಯಾಗಿ ಭಾಗವಹಿಸಿ ಸಂಗೀತ ಹಾಗೂ ಭರತನಾಟ್ಯ ಕಾರ್ಯಕ್ರಮವನ್ನು ಪ್ರದರ್ಶಿಸಿದರು.

ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಉದ್ಘಾಟಿಸಿ ಮಾತನಾಡಿ, ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಸಮಾಜದಲ್ಲಿ ಮೌಲ್ಯ ಮತ್ತು ಸಂಸ್ಕೃತಿಯನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಡಿ.ಆರ್. ಪಾಟೀಲ್, ಬಿ.ಬಿ. ಅಸೂಟಿ, ಬಿ.ಕೆ. ಜಯಂತಿ ಅಕ್ಕನವರು, ಬಿ.ಕೆ. ಸಾವಿತ್ರಿ ಅಕ್ಕನವರು, ಅಕ್ಬರಸಾಬ್ ಬಬರ್ಚಿ ಮುಂತಾದವರು ಉಪಸ್ಥಿತರಿದ್ದರು.

ಸಂಸ್ಥೆಯ ಅಧ್ಯಕ್ಷರಾದ ಜ್ಯೋತಿ ಉಜ್ವಲ್ ಕಬಾಡಿ, ಭರತನಾಟ್ಯ ಶಿಕ್ಷಕಿ ವರ್ಷಾ ಕಲಕಂಬಿ ನೇತೃತ್ವದಲ್ಲಿ ನಡೆದ ಭರತನಾಟ್ಯ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಾದ ಶ್ರದ್ಧಾ ಕಬಾಡಿ, ಅಪೂರ್ವ, ವೈಷ್ಣವಿ, ವೇದಾ, ಸ್ಫೂರ್ತಿ, ವೈಷ್ಣವಿ ಗುಳೇದಗುಡ್ಡ ಹಾಗೂ ಮೇಧಾ ಭಾಗವಹಿಸಿದ್ದರು.

ಉಜ್ವಲ್ ಕಬಾಡಿ ಹಾರ್ಮೋನಿಯಂ ಸಾಥ್ ಮತ್ತು ಹನುಮಂತ ಮೈತ್ರಿ ತಬಲಾ ಸಾಥ್ ನೀಡಿದರು.ಸಂಸ್ಥೆಯ ಕಾರ್ಯದರ್ಶಿ ಉಜ್ವಲ್ ಕಬಾಡಿ ಮುಂತಾದವರು ಉಪಸ್ಥಿತರಿದ್ದರು.

## ಇನ್ಫೋಸಿಸ್ 'ಪುಲಿಗೆರೆ ಉತ್ಸವ' ಇಂದಿನಿಂದ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಇನ್ಫೋಸಿಸ್ ಪ್ರತಿಷ್ಠಾನ ಹಾಗೂ ಭಾರತೀಯ ವಿದ್ಯಾಭವನ ಬೆಂಗಳೂರು ಇವರ ಸಹಯೋಗದಲ್ಲಿ ಪುಲಿಗೆರೆ ಉತ್ಸವ ಫೆ. 20, 21 ಮತ್ತು 22ರಂದು ನಡೆಯಲಿದೆ.

ಉತ್ಸವ ಶುಕ್ರವಾರ ವಿದ್ಯುಕ್ತವಾಗಿ ಪ್ರಾರಂಭಗೊಳ್ಳಲಿದೆ. ಬೆಳಿಗ್ಗೆ 6ಕ್ಕೆ ಪುಲಿಗೆರೆ ಉತ್ಸವವನ್ನು ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲಕುಲಕರ್ಣಿ, ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಉದ್ಘಾಟಿಸಲಿದ್ದಾರೆ. ಅತಿಥಿಗಳಾಗಿ ಇನ್ಫೋಸಿಸ್ ಪ್ರತಿಷ್ಠಾನದ ಸಿ.ಎಸ್. ಆರ್ ವಿಭಾಗದ ವ್ಯವಸ್ಥಾಪಕ ಪ್ರಶಾಂತ ಹೆಗಡೆ ಭಾಗವಹಿಸಲಿದ್ದಾರೆ.

ಬೆಳಿಗ್ಗೆ 6.15ಕ್ಕೆ ಉದಯರಾಗ–1ರಲ್ಲಿ ಲಕ್ಷ್ಮೇಶ್ವರದ ಮುಕ್ತಾ ಕುಲಕರ್ಣಿ ಅವರಿಂದ ಸಿತಾರ ವಾದನ, 7.15 ಕ್ಕೆ ಹುಬ್ಬಳ್ಳಿಯ ವಿ. ರಾಜೇಶ್ವರಿ ಪಾಟೀಲ ಅವರಿಂದ ಹಿಂದೂಸ್ತಾನಿ ಗಾಯನ



ನಡೆಯಲಿದೆ. ಸಂಜೆ ನಡೆಯುವ ಕಾರ್ಯಕ್ರಮದಲ್ಲಿ ಇನ್ಫೋಸಿಸ್ ಪ್ರತಿಷ್ಠಾನದ ಸಿ.ಎಸ್.ಆರ್ ವಿಭಾಗದ ವ್ಯವಸ್ಥಾಪಕ ಪ್ರಶಾಂತ ಹೆಗಡೆ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಸಂಜೆ 4ಕ್ಕೆ ಸೋಮೇಶ್ವರನ ಪಲ್ಲಕ್ಕಿ ಉತ್ಸವ ನೆರವೇರಲಿದೆ.

ಸಂಜೆ 5.30ಕ್ಕೆ ಸಿದ್ದಾಪುರದ ಕೊಳಗಿ ಕೇಶವ ಹೆಗಡೆ ತಂಡದಿಂದ ಯಕ್ಷಗಾನ, 6.30ಕ್ಕೆ ಶಿಗ್ಗಾವದ ಶರಣ ಶೇಖಪ್ಪ ಬಡ್ಡಿ ಮತ್ತು ತಂಡದವರಿಂದ ಭರತನಾಟ್ಯ ನಡೆಯಲಿದ್ದು, 7.30ಕ್ಕೆ ಲಕ್ಷ್ಮೇಶ್ವರದ ಡಾ. ಅರ್ಜುನ ವಠಾರ್ ಅವರಿಂದ ಹಿಂದೂಸ್ತಾನಿ ಗಾಯನ ನೆರವೇರಲಿದೆ.

## ವಿದ್ಯುತ್ ಅದಾಲತ್ ನಾಳೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಶಹರ/ಗ್ರಾಮೀಣ ಪ್ರದೇಶಗಳಲ್ಲಿನ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳಿನ 3ನೇ ಶನಿವಾರ ಸಹಾಯಕ ಕಾರ್ಯಪಾಲಕ ಅಭಿಯಂತರರು, ಗದಗ ಶಹರ/ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ವಿದ್ಯುತ್ ಅದಾಲತ್ ನಡೆಸುವ ಮೂಲಕ ಸ್ಥಳದಲ್ಲಿಯೇ ಗ್ರಾಹಕರ ಸಮಸ್ಯೆಗಳಿಗೆ ಪರಿಹಾರ ನೀಡಲು ಕ್ರಮ ವಹಿಸಲು ಸರ್ಕಾರವು ಆದೇಶಿಸಿದೆ.

ಇದರ ಪ್ರಯುಕ್ತ ಫೆ. 21ರಂದು ಮಧ್ಯಾಹ್ನ 3 ಗಂಟೆಗೆ ವಿದ್ಯುತ್ ಅದಾಲತ್ ನಡೆಸಲಾಗುವುದು. ಆದ್ದರಿಂದ ಸಾರ್ವಜನಿಕರು ಪ್ರಕಟಣೆಯನ್ನು ಗಮನಿಸಿ ತಮ್ಮ ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಹೆಸ್ಕಾಂ ಪ್ರಕಟಣೆ ಕೋರಿದೆ.

## ನವೀಕೃತ ಕಲಿಕಾ ಕೊಠಡಿಗಳ ಉದ್ಘಾಟನೆ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಸರಕಾರಿ ಮಾದರಿ ಪ್ರಾಥಮಿಕ ಹೆಣ್ಣುಮಕ್ಕಳ ಶಾಲೆಯಲ್ಲಿ ನೂತನವಾಗಿ ನವೀಕರಣಗೊಂಡ ಎರಡು ಕಲಿಕಾ ಕೊಠಡಿಗಳನ್ನು ಶಾಸಕ ಡಾ. ಚಂದ್ರು ಲಮಾಣಿ ಬುಧವಾರ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಶಾಸಕರು, ಪ್ರಸ್ತುತ ಈ ಶಾಲೆಯಲ್ಲಿನ ಕೊಠಡಿಗಳು ಮಳೆಯಿಂದ ಹಾನಿಗೊಳಗಾಗಿದ್ದು, ಇದಕ್ಕಾಗಿ ಸರಕಾರದಿಂದ ವಿಶೇಷ ಅನುದಾನವನ್ನು ಬಿಡುಗಡೆಗೊಳಿಸಿ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಕ್ಷೇತ್ರಾದ್ಯಂತ ಅನೇಕ ಶಾಲೆಗಳಲ್ಲಿ ಕೊಠಡಿಗಳು, ಶೌಚಾಲಯ ಇನ್ನಿತರ ಬೇಡಿಕೆಗಳು ಇದ್ದು, ಬಹುತೇಕ ಎಲ್ಲ ಸರಕಾರಿ ಶಾಲೆಗಳ ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವದು. ಹಂತ ಹಂತವಾಗಿ



ಎಲ್ಲ ಶಾಲೆಗಳ ಬೇಡಿಕೆಗಳನ್ನು ಅನುದಾನಕ್ಕೆ ಅನುಗುಣವಾಗಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುತ್ತೇನೆ. ಇಲ್ಲಿನ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು ಮತ್ತು ಎಸ್‌ಡಿಎಂಸಿಯವರು ಶಾಲೆಯ ಬಗ್ಗೆ ವಿಶೇಷ ಕಾಳಜಿಯನ್ನು ಹೊಂದಿದ್ದು, ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ಈ ವೇಳೆ ಎಸ್‌ಡಿಎಂಸಿ ಅಧ್ಯಕ್ಷೆ ನಿಖಿತಾ ಶೇರಖಾನೆ, ಸರಕಾರಿ ನೌಕರರ ಸಂಘದ ಅಧ್ಯಕ್ಷ ಗುರುರಾಜ ಹವಳದ, ಬಿ.ಎಸ್. ಹರ್ಲಾಪೂರ, ಪೂರ್ಣಾಜಿ ಖರಾಟೆ, ಮುಖ್ಯೋಪಾಧ್ಯಾಯ ಬಿ.ಎಂ. ಕುಂಬಾರ, ಸಿ.ಆರ್‌ಪಿಗಳು, ಶಿಕ್ಷಕರು, ಎಸ್‌ಡಿಎಂಸಿ ಸದಸ್ಯರು ಹಾಜರಿದ್ದರು.

## ಉಮಾ ವಿದ್ಯಾಲಯದಲ್ಲಿ ಗುರು ವಂದನಾ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಾವಿರಾರು ಮಕ್ಕಳ ಭವಿಷ್ಯ ರೂಪಿಸಿದ ಶಿಕ್ಷಕರನ್ನು ಗೌರವಿಸುವುದೇ ಭಾಗ್ಯ ಎನ್ನುವ ನಿಟ್ಟಿನಲ್ಲಿ ಪಟ್ಟಣದ ಶತಮಾನದ ಇತಿಹಾಸ ಹೊಂದಿರುವ ಉಮಾ ವಿದ್ಯಾಲಯದಲ್ಲಿ 1985–86ನೇ ಸಾಲಿನಲ್ಲಿ ಕಲಿತ ವಿದ್ಯಾರ್ಥಿಗಳ ಸ್ನೇಹಲೋಕ–1985–86 ಸ್ನೇಹಿತರ ವತಿಯಿಂದ ಗುರುವಂದನಾ ಕಾರ್ಯಕ್ರಮವನ್ನು ಪಟ್ಟಣದ ಶ್ರೀ ಶಂಕರಭಾರತಿ ಸಮುದಾಯ ಭವನದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಪ್ರತಿಯೊಬ್ಬರೂ ತಮ್ಮ ವಿದ್ಯಾರ್ಥಿ ಜೀವನದ ಸುಮಧುರ ಕ್ಷಣ, ನೋವು–ನಲಿವಿನ ಕ್ಷಣಗಳನ್ನು ಹಂಚಿಕೊಂಡರು. ಬದುಕಿನ ಉನ್ನತಿಗೆ ಕಾರಣರಾದ ತಮ್ಮ ನೆಚ್ಚಿನ ಗುರುವೃಂದಕ್ಕೆ ಹೃದಯಸ್ಪರ್ಶಿಯಾಗಿ ಸನ್ಮಾನಿಸಿ ಧನ್ಯತಾಭಾವ ಮೆರೆದರು.

ಕಾರ್ಯಕ್ರಮ ಉದ್ಘಾಟಿಸಿದ ಉಮಾ ವಿದ್ಯಾಲಯ ಹೈಸ್ಕೂಲ್‌ನ ನಿವೃತ್ತ ಮುಖ್ಯೋಪಾಧ್ಯಾಯ ಡಾ. ಎನ್.ವಿ. ಧೂಳಖೇಡ ಮಾತನಾಡಿ, ಸುಮಾರು 40 ವರ್ಷಗಳ ಹಿಂದಿನ ವಿದ್ಯಾರ್ಥಿಗಳು ಒಂದೆಡೆ ಸೇರಿ ಈ ಕಾರ್ಯಕ್ರಮ ನಡೆಸುತ್ತಿರುವುದು ಸಂತೋಷದ ವಿಚಾರ. ಸಮಾಜದಿಂದ ನಾವು ಏನಾದರೂ ಪಡೆಯುವುದಕ್ಕಿಂತ ಮೊದಲು ಸಮಾಜಕ್ಕೆ ನಾನೇನು ಮಾಡಿದ್ದೇನೆ ಎಂಬುದನ್ನು ನಾವು ಮನದಟ್ಟು ಮಾಡಿಕೊಳ್ಳಬೇಕು. ಸಮಾಜಕ್ಕೆ ಒಳಿತಾಗುವ ಕಾರ್ಯ ಮಾಡಿ ಆದರ್ಶ ವ್ಯಕ್ತಿಗಳಾಗಿ ಬಾಳಬೇಕು. ಇದು ಶಿಕ್ಷಕರಿಗೆ ನಿಜವಾದ ವಿದ್ಯಾರ್ಥಿಗಳು ನೀಡುವ ಕಾಣಿಕೆಯಾಗಿದೆ ಎಂದು ಹೇಳಿದರು.

ನಿವೃತ್ತ ಶಿಕ್ಷಕರಾದ ಎಸ್.ಸಿ. ಸಂಶಿ, ಎಸ್.ಎಸ್. ನಾಗಲೋಟಿ, ಎಸ್.ಎಫ್. ಬೂದಿಹಾಳ, ಎಚ್.ಎಫ್. ಮುದಗಲ್, ಎಚ್.ಎಂ. ಮುಳಗುಂದ, ಎಸ್.ಸಿ. ಅಳಗವಾಡಿ, ಆಯ್.ಕೆ. ಹೊನ್ನಪ್ಪನವರ, ಎಸ್.ಬಿ. ಕೊಣ್ಣೂರ, ಎನ್.ಬಿ. ಸೂರಣಗಿ, ಝಡ್.ಎಂ. ಬಾಂದಾರ, ಆರ್.ಎಂ. ಭಾಂಗಿ ಹಾಗೂ ಶಿಕ್ಷಕೇತರ ಸಿಬ್ಬಂದಿಗಳಾದ ಜಿ.ಜಿ. ಹಾಲೇವಾಡಿಮಠ, ಮೋಹನ ಸುತಾರ, ಎನ್.ಎಚ್. ಶರಸೂರಿ, ಬಿ.ಎಂ. ಅರಳಿಕಟ್ಟಿ, ಸಾತಪೂತೆ, ಹೆಸರೂರ ಮತ್ತಿತರರನ್ನು ಗೌರವಿಸಲಾಯಿತು.

ಪ್ರಕಾಶ ಮ್ಯಾಗೇರಿ ಸ್ವಾಗತಿಸಿದರು. ಎಸ್.ಎಫ್. ಕೊಡ್ಲಿ ಪ್ರಾಸ್ತಾವಿಕವಾಗಿ ಮಾತನಡಿದರು. ಗಿರೀಶ ಅಗಡಿ ನಿರೂಪಿಸಿದರು. ರಾಯು ನಾಯಕ್ ವಂದಿಸಿದರು.

**ಎಸ್‌ಎಸ್‌ಕೆ ಸಮಾಜ ಬಾಂಧವರಿಂದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆ**

# ಹಿಂದೂಗಳು ಎಲ್ಲರೂ ಒಗ್ಗಟ್ಟಾಗಬೇಕಿದೆ



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಿಯಲ್ ಎಸ್ಟೇಟ್ ಉದ್ಯಮಿ ಸುಧೀರ ಕಾಟಿಗರ ಮಾತನಾಡಿ, ನಾವೆಲ್ಲರೂ ಒಂದಾಗಿ ಹಿಂದುತ್ವವನ್ನು ರಕ್ಷಣೆ ಮಾಡಬೇಕಿದೆ. ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಿಸಿದರೆ ಮಾತ್ರ ಸಾಲದು, ಇಂದಿನ ದಿನಗಳಲ್ಲಿ ಹಿಂದೂಗಳ ಮೇಲೆ ಆಗುತ್ತಿರುವ ದೌರ್ಜನ್ಯವನ್ನು ತಡೆಗಟ್ಟಲೂ ನಾವೆಲ್ಲ ಒಗ್ಗಟ್ಟಾಗಿ ಹೋರಾಡಬೇಕಿದೆ ಎಂದು ಹೇಳಿದರು.

**■ ವಿಜಯಸಾಕ್ಷಿ ಸುದ್ದಿ, ಗದಗ**

ಹಿಂದೂಗಳು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಆಚರಿಸುವ ಮೂಲಕ ನಾವೆಲ್ಲರೂ ಒಂದಾಗಬೇಕು ಎಂದು ಹಿರಿಯ ಉದ್ಯಮಿ ಈಶ್ವರಸಾ ಮೆಹರವಾಡೆ ಹೇಳಿದರು.

ಅವರು ಗದಗ–ಬೆಟಗೇರಿ ಅವಳಿ ನಗರದ 31ನೇ ವಾರ್ಡಿನ ಜೋಡ ಮಾರುತಿ ದೇವಸ್ಥಾನದ ಎದುರಿನ ಕಿಲ್ಲಾ ಓಣಿಯ ಎಸ್‌ಎಸ್‌ಕೆ ಸಮಾಜ ಬಾಂಧವರು ಹಮ್ಮಿಕೊಂಡ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯಲ್ಲಿ ಪಾಲ್ಗೊಂಡು ಮಾತನಾಡಿ, ಅಖಂಡ ಹಿಂದೂ ಸಮಾಜ ನಿರ್ಮಾಣಕ್ಕಾಗಿ ಛತ್ರಪತಿ ಶಿವಾಜಿ ಮಹಾರಾಜರು ಸಾಕಷ್ಟು ಹೋರಾಟ ಮಾಡಿದ್ದಾರೆ. ಅವರ ಕನಸನ್ನು ನಾವೆಲ್ಲರೂ ನನಸು ಮಾಡಬೇಕಿದೆ. ನಾವೆಲ್ಲ ಹಿಂದೂಗಳು ಒಗ್ಗಟ್ಟಾಗದಿದ್ದರೆ ಮುಂದಿನ ದಿನಗಳಲ್ಲಿ ನಮ್ಮೆಲ್ಲರಿಗೂ ಕಷ್ಟದ ದಿನಗಳು ಬರಲಿವೆ ಎಂದರು.

ಎಸ್.ಎಸ್.ಕೆ ಸಮಾಜ ಬಾಂಧವರಿಂದ ಶಿವಾಜಿ ಜಯಂತಿ ನಿಮಿತ್ತ ಶಾಲಾ ಮಕ್ಕಳಿಗೆ ಕುಡಿಯುವ ನೀರಿನ ಸ್ಟೀಲ್ ಬಾಟಲ್‌ಗಳನ್ನು ನೀಡಿರುವುದು ಶ್ಲಾಘನೀಯ. ಜೊತೆಗೆ ಮಕ್ಕಳಿಗೆ ಶಿವಾಜಿ ಮಹಾರಾಜ ಜೀವನದ ಕಥೆಗಳನ್ನು ಹೇಳಿ ಅವರನ್ನು ರಾಷ್ಟ್ರಭಕ್ತರನ್ನಾಗಿ ಮಾಡಬೇಕಾಗಿರುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಇದಕ್ಕೂ ಮುನ್ನ ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಜೋಡ ಮಾರುತಿ ದೇವಸ್ಥಾನದ ಅರ್ಚಕ ರಂಗಪ್ಪ ಪೂಜಾರಿ ಅವಿಶೇಷ ಪೂಜೆ ಸಲ್ಲಿಸಿದರು. ಸಂದರ್ಭದಲ್ಲಿ ವಿಠ್ಠಲ ಬಾಂಡಗೆ, ಪರಶುರಾಮ ಬದಿ, ಪದ್ಮಾನಂದ ಬೇವಿನಕಟ್ಟಿ, ರಾಮಚಂದ್ರ ಶಿದ್ಲಿಂಗ, ಪರಶುರಾಮ ಮಿಸ್ಕಿನ್, ಶಿವಾನಂದ ಪೂಜಾರಿ, ನೇಮಚಂದ ಪವಾರ, ಸಂದೀಪ ಕಬಾಡಿ, ಸುನೀಲ ಬಸವಾ, ಲಕ್ಷ್ಮಣ ದೇವಖತ್, ಮನ್ನು ದಲಬಂಜನ, ಪ್ರಕಾಶ ಕಾಟಿಗರ, ರಾಹುಲ್ ಚವ್ಹಾಣ, ರಾಜು ಮಗಜಿ, ನಾರಾಯಣ ಟಿಕಣದಾರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. ಶ್ರೀಕಾಂತ ಬಾಕಳೆ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ರವಿ ಚವ್ಹಾಣ ವಂದಿಸಿದರು.

**ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**
**ಪಿನ್ ಕೋಡ್ ನಂ. 582101. ದೂರವಾಣಿ: 08372–278003.**
**ಇ–ಮೇಲ್: uda_gadag@hotmail.com**

ಸಂ: ನಅಪ್ರಾಗಬೆ/ಭೂಬ(14)/2025–26/1422 ದಿನಾಂಕ: 18–02–2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಶ್ರೀ **ಬಸವರಾಜ ಗೂಳಪ್ಪ ಹೆರಕಲ್ ಹಾಗೂ ಇತರರು** ಸಾ॥ ಗದಗ ಈ ಕೆಳಕಂಡ ಜಮೀನನ್ನು ಭೂ–ಉಪಯೋಗ ನಿಗಧಿಪಡಿಸಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ–ಉಪಯೋಗ ನಿಗಧಿಪಡಿಸುವದರಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆ ಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ **1961** ರ ಕಲಂ **69(3)** ರಂತೆ ಭೂ–ಉಪಯೋಗ ನಿಗದಿಪಡಿಸುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ **15 (ಹದಿನೈದು)** ದಿನಗಳೊಳಗಾಗಿ ಆಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ. ಬಿ. ರೋಡ ಗದಗ–582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ. | ಗ್ರಾಮ | ರಿ.ಸ.ನಂ. | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ–ಉಪಯೋಗ | ಅರ್ಜಿದಾರರು ಬಯಸಿರುವ ಭೂ–ಉಪಯೋಗ ಬದಲಾವಣೆ |
|---|---|---|---|---|---|
| 01 | ಗದಗ | 80/*/2 | 05ಎಕರೆ–00ಗುಂಟೆ ಪೈಕಿ 01ಎಕರೆ–18ಗುಂಟೆ | ಸಾರಿಗೆ ಮತ್ತು ಸಂಪರ್ಕ (Transport & Communication) | ವಸತಿ |

ವಾ.ಸಾ.ಇ./ಗದಗ/661/
ದೇಶಪಾಂಡೆಪಬ್ಲಿಸಿಟಿ/2025–26

ಸಹಿ/– ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ–ಬೆಟಗೇರಿ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka